MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER · VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್ Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ Cell : 9743496111

ಸಂಪುಟ: 04 | ಸಂಚಿಕೆ: 334 | ಮಂಗಳವಾರ : 28-10-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 334 | TUESDAY : 28-10-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ರೈತರ ಹಿತ ಕಡೆಗಣಿಸಿ ಬೆಂಗಳೂರಿನಲ್ಲಿ ಟಿಬಿ ಅಣೆಕಟ್ಟು ಸಮಿತಿ ಸಭೆ: ಮಾಜಿ ಶಾಸಕ ರಾಜಾ ವೆಂಕಟಪ್ಪನಾಯಕ ಆಕ್ರೋಶ

ಯುವ ಮಾರ್ಗ ಸುದ್ದಿ




**ಮಾನ್ವಿ,ಅ.27–** ತುಂಗಭದ್ರ ಜಲಾಶಯದ ನೀರಾವರಿ ಸಲಹಾ ಸಮಿತಿ ಸಭೆಯನ್ನು ಈ ಭಾಗದ ಜನಪ್ರತಿನಿಧಿಗಳು ಮತ್ತು ರೈತ ಮುಖಂಡರನ್ನು ಹೊರಗಿಟ್ಟು ಬೆಂಗಳೂರಿನ ವಿಧಾನಸೌಧದಲ್ಲಿ ನಡೆಸುತ್ತಿರುವುದು ರೈತರಿಗೆ ಅನ್ಯಾಯವೆಸಗಿದಂತಿದೆ ಎಂದು ಮಾಜಿ ಶಾಸಕ ರಾಜಾ ವೆಂಕಟಪ್ಪನಾಯಕ ಅವರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಪತ್ರಿಕಾ ಭವನದಲ್ಲಿ ಮಾತನಾಡಿದ ಅವರು, ಈ ಹಿಂದೆ ಜಲಾಶಯದಲ್ಲಿನ ನೀರಿನ ಮಟ್ಟ, ಕ್ರೆಸ್ಟ್ ಗೇಟ್‌ಗಳ ಸ್ಥಿತಿಗತಿ ಪರಿಶೀಲಿಸಿ ರೈತರ ಬೆಳೆಗಳಿಗೆ ನೀರು ಬಿಡುವ ಕುರಿತು ನಿರ್ಧರಿಸಲು ಅಧಿಕಾರಿಗಳು, ಜನಪ್ರತಿನಿಧಿಗಳು ಮತ್ತು ರೈತ ಮುಖಂಡರನ್ನು ಒಳಗೊಂಡ ಟಿಬಿ ನೀರಾವರಿ ಸಲಹಾ ಸಮಿತಿ ಸಭೆಯನ್ನು ಮುನಿರಾಬಾದ್‌ನಲ್ಲಿ ನಡೆಸುವುದು ವಾಡಿಕೆಯಾಗಿತ್ತು. ಆದರೆ, ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ತಂಗಡಗಿ ಅವರು ವಿವಿಧ ಕಾರಣ ನೀಡಿ, ಕೇವಲ ಅಧಿಕಾರಿಗಳ ವರದಿ ಆಧಾರದ ಮೇಲೆ ಸಭೆಯನ್ನು ಬೆಂಗಳೂರಿನಲ್ಲಿ ನಡೆಸುತ್ತಿರುವುದು ಸರಿಯಲ್ಲ ಎಂದರು.

ಪ್ರಸ್ತುತ ತುಂಗಭದ್ರ ಜಲಾಶಯದಲ್ಲಿ 80 ಟಿಎಂಸಿ ನೀರು ಸಂಗ್ರಹವಿದ್ದು, ಒಳಹರಿವು ಉತ್ತಮವಾಗಿರುವುದರಿಂದ ರೈತರ ಎರಡನೇ ಬೆಳೆಗೆ ನೀರು ನೀಡಲು ಸಾಧ್ಯವಿದೆ. ಆದರೆ, ಸರ್ಕಾರ ಬೇಸಿಗೆಯಲ್ಲಿ ಬದಲಾಯಿಸಬೇಕಿದ್ದ ಕ್ರೆಸ್ಟ್ ಗೇಟ್‌ಗಳನ್ನು ರೈತರು ಭತ್ತ ಬೆಳೆಯುವ ಸಮಯದಲ್ಲಿ ಬದಲಾವಣೆ ಮಾಡಲು ಮುಂದಾಗಿರುವುದರಿಂದ ಸುಮಾರು 40 ಟಿಎಂಸಿ ನೀರು ಖಾಲಿ ಮಾಡಬೇಕಾಗುತ್ತದೆ. ಇದರಿಂದ ನೀರು ನದಿಗೆ ಹರಿದು ಹೋಗುತ್ತದೆ.

"ಕೂಡಲೇ ಸರ್ಕಾರ ಅಣೆಕಟ್ಟು ನಿರ್ವಹಣಾ ತಜ್ಞರನ್ನು ನೇಮಕ ಮಾಡಿ ವರದಿ ಪಡೆದು, ಅಣೆಕಟ್ಟೆಯ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ರೈತರ ಬೆಳೆಗೆ ನೀರು ಬಿಡಬೇಕು. ಅಲ್ಲದೆ, ಮೊದಲಿನಂತೆ ಮುನಿರಾಬಾದ್‌ನಲ್ಲಿಯೇ ಸಭೆ ನಡೆಸಿ ರೈತರ 2ನೇ ಬೆಳೆಗೆ ನೀರು ನೀಡಲು ಕ್ರಮ ಕೈಗೊಳ್ಳಬೇಕು," ಎಂದು ರಾಜಾ ವೆಂಕಟಪ್ಪನಾಯಕ ಅವರು ಸರ್ಕಾರವನ್ನು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಾನ್ವಿ ತಾಲೂಕು ಜೆ.ಡಿ.ಎಸ್. ಅಧ್ಯಕ್ಷ ಡಾ. ಈರಣ್ಣ ಮರ್ಲಟ್ಟಿ ಪೋತ್ನಾಳ್ ಅವರು, ಅತಿವೃಷ್ಟಿಯಿಂದಾಗಿ ಹತ್ತಿ, ತೊಗರಿ, ಜೋಳ ಬೆಳೆ ಹಾನಿಯಾಗಿದ್ದು, ಸರ್ಕಾರ ಕೂಡಲೇ ರೈತರಿಗೆ ಬೆಳೆ ನಷ್ಟ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ಇದಲ್ಲದೆ, ರೈತರ ಎಲ್ಲ ಜಮೀನುಗಳಿಗೆ ಸರಿಯಾಗಿ ಜಿಪಿಎಸ್ ಮಾಡಿಸಬೇಕು. ತಾಲೂಕಿನಲ್ಲಿ ಕಳಪೆ ಗುಣಮಟ್ಟದ ಬಿತ್ತನೆ ಬೀಜ ಮಾರಾಟ ಮಾಡುತ್ತಿರುವ ಕೃಷಿ ಪರಿಕರಗಳ ಅಂಗಡಿಗಳ (2ನೇಪುಟಕ್ಕೆ)

ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ಸಿದ್ಧತೆ ಪ್ರಕ್ರಿಯೆ

## ರಾಯಚೂರಿನಲ್ಲಿ ಮತದಾರರ ವಿಶೇಷ ಮಿಂಚಿನ ನೋಂದಣಿ ಅಭಿಯಾನಕ್ಕೆ ಚಾಲನೆ

ಯುವ ಮಾರ್ಗ ಸುದ್ದಿ




**ರಾಯಚೂರು,ಅ.27–**ಅರ್ಹ ಶಿಕ್ಷಕರು ಹೆಚ್ಚಿನ ಆಸಕ್ತಿ ವಹಿಸಿ, ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು ಎಂದು ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ ಅವರು ಹೇಳಿದರು.

ಸೋಮವಾರ ನಗರದ ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ಸ್ವೀಪ್ ಸಮಿತಿ ಹಾಗೂ ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ನಡೆದ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ– 2026ರ ಮತದಾರರ ವಿಶೇಷ ಮಿಂಚಿನ ನೋಂದಣಿ ಅಭಿಯಾನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಅರ್ಹ ಮತದಾರರು, ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆಗೆ ನವೆಂಬರ್ 6 ಕೊನೆಯ ದಿನವಾಗಿದ್ದು, ಅಲ್ಲಿವರೆಗೆ ಕಾಯದೇ ಕೂಡಲೇ ಹೆಸರು ನೋಂದಾಯಿಸಿಕೊಳ್ಳಬೇಕು. ಈ ಹಿಂದಿನ ಮತದಾರರ ಪಟ್ಟಿಯಲ್ಲಿ ಹೆಸರು ಇರುವ ಮತದಾರರು ಸಹ ನಮೂನೆ 19ರಲ್ಲಿ ಹೊಸದಾಗಿ ಅರ್ಜಿ ಸಲ್ಲಿಸಬೇಕು. ಮತದಾರರ ಪರಿಷ್ಕರಣೆ ಭಾಗವಾಗಿ ಕರಡು ಮತದಾರರ ಪಟ್ಟಿಯನ್ನು ನವೆಂಬರ್ 25 ರಂದು ಪ್ರಕಟಿಸಿ ಡಿಸೆಂಬರ್ 10 ರೊಳಗೆ ಆಕ್ಷೇಪಣೆ ಸ್ವೀಕರಿಸಲಾಗುತ್ತದೆ. ಅಂತಿಮ ಮತದಾರರ ಪಟ್ಟಿಯನ್ನು 2025ರ ಡಿಸೆಂಬರ್ 30 ರಂದು ಪ್ರಕಟಿಸಲಾಗುತ್ತದೆ ಎಂದರು.

ಜಿಲ್ಲೆಯ ಎಲ್ಲಾ ಸಂಬಂಧಪಟ್ಟ ತಾಲೂಕಿನ ತಹಶೀಲ್ದಾರರು ಸಹಾಯಕ ಮತದಾರರ ನೋಂದಣಾಧಿಕಾರಿಯಾಗಿ ಕಾರ್ಯನಿರ್ವಹಿಸಲಿದ್ದು, ಈ ಕಚೇರಿಗಳಿಗೆ ಕಾಲಮಿತಿಯಲ್ಲಿ ಅರ್ಜಿ, ಆಕ್ಷೇಪಣೆ ಸಲ್ಲಿಸಬಹುದಾಗಿದೆ ಎಂದರು.

**ಶೇ.100ರಷ್ಟು ನೋಂದಣಿ ಮಾಡಿ:** ರಿಮ್ಸ್ ಸಂಸ್ಥೆಯ ಎಲ್ಲ ಅರ್ಹ ಮತದಾರರು ಮತದಾರರ ಪಟ್ಟಿಯಲ್ಲಿ ತಪ್ಪದೇ ಹೆಸರು ನೋಂದಣಿ ಮಾಡಿಕೊಳ್ಳಬೇಕು. ಸಂವಿಧಾನವು ಪ್ರತಿಯೊಬ್ಬ ವ್ಯಕ್ತಿಗೂ ಮತದಾನ ಮಾಡುವ ಹಕ್ಕನ್ನು ನೀಡಿದೆ. ಹೆಸರು ನೋಂದಣಿ ಮಾಡಿಸಿದ್ದಲ್ಲಿ ಮಾತ್ರ ಮತದಾನ ಮಾಡಲಿಕ್ಕೆ ಅವಕಾಶ ಸಿಗಲಿದೆ ಎಂದು ತಿಳಿಸಿದರು.

**ಹೆಸರು ಸೇರಿಸಲು ಅರ್ಹತೆ:** ಭಾರತದ ಪ್ರಜೆಯಾಗಿರುವ ಆಯಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸಾಮಾನ್ಯ ನಿವಾಸಿಯಾಗಿರುವ ಹಾಗೂ (2ನೇಪುಟಕ್ಕೆ)

## ವಿಪತ್ತು ನಿರ್ವಹಣಾ ತರಬೇತಿ ಶಿಬಿರ: ರೋವರ್ ಮತ್ತು ರೇಂಜರ್ ಭಾಗಿ

ಯುವ ಮಾರ್ಗ ಸುದ್ದಿ



**ಲಿಂಗಸುಗೂರು,ಅ.27–**ದೊಡ್ಡಬಳ್ಳಾಪುರದ ಡಾ. ಅನಿಬೆಸೆಂಟ್ ಸ್ಕೌಟ್ – ಗೈಡ್ ರಾಜ್ಯ ತರಬೇತಿ ಮತ್ತು ಶಿಬಿರ ಕೇಂದ್ರದಲ್ಲಿ ಅಕ್ಟೋಬರ್ 14 ರಿಂದ 20 ರವರೆಗೆ ಯುವ ಆಪದ ಮಿತ್ರ ಯೋಜನೆಯ ಅಡಿಯಲ್ಲಿ ನಡೆದ " ವಿಪತ್ತು ನಿರ್ವಹಣಾ ತರಬೇತಿ ಶಿಬಿರ" ದಲ್ಲಿ ಲಿಂಗಸುಗೂರಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ರೋವರ್ – ರೇಂಜರ್ ವಿದ್ಯಾರ್ಥಿಗಳು ಪಾಲ್ಗೊಂಡು ಯಶಸ್ವಿಯಾಗಿ ತರಬೇತಿ ಪೂರೈಸಿ ಬಂದರು.

ತರಬೇತಿ ಪೂರೈಸಿ ಬಂದ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಪ್ರಾಂಶುಪಾಲ ಡಾ.ವೆಂಕಟನಾರಯಣ ಎಮ್ ಅವರು ವಿಪತ್ತು ನಿರ್ವಹಣ ತರಬೇತಿ ನಮ್ಮ ವಿದ್ಯಾರ್ಥಿಗಳಿಗೆ ಅವಶ್ಯವಾಗಿತ್ತು. ಈ ತರಬೇತಿ ಪಡೆದ ವಿದ್ಯಾರ್ಥಿಗಳು ಪ್ರವಾಹ, ಅಗ್ನಿ ಅವಘಡ ಇನ್ನಿತರ ಅಪಘಾತದ ಸಂದರ್ಭದ ಆಪತ್ಕಾಲದಲ್ಲಿ ಸ್ವಯಂ ಸೇವಕರಾಗಿ ಕೆಲಸ ಮಾಡುವ ಮೂಲಕ ಆಪತ್ತಿನಲ್ಲಿ ಇರುವವರನ್ನು ರಕ್ಷಿಸಲು ಸಹಾಯವಾಗುವುದು. ಸ್ವಯಂ ಪ್ರೇರಣೆಯಿಂದ ತಮ್ಮ ಜೀವ ಪಣಕ್ಕೊಡ್ಡಿ ಕೆಲಸ ಮಾಡಿದಾಗ ಈ ತರಬೇತಿ ಸಾರ್ಥಕತೆ ಆಗುವುದು. ಯುವಕರು ಇಂತಹ ತರಬೇತಿಗಳಿಂದ ಪ್ರೇರಿತರಾಗಿ ಸಮಾಜ ಸೇವೆ ಮಾಡಬೇಕೆಂದರು. ಯಶಸ್ವಿಯಾಗಿ ತರಬೇತಿ ಪೂರೈಸಿದ ರೋವರ್ ರೇಂಜರ್ ಅವರನ್ನು ಶ್ಲಾಘಿಸಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಸಹ ಪ್ರಾಧ್ಯಾಪಕರಾದ ಡಾ. ಹನುಮಂತಪ್ಪ ಡಾ. ಸಂಗನಗೌಡ ಡಾ.ಆರೀಫ್ ಸಹಾಯಕ ಪ್ರಾಧ್ಯಾಪಕರಾದ ಡಾ. ನವೀನ್ ಚಂದಾರ್ವಕರ್ ನಜ್ಮಾಬೇಗಂ ಮಹೇಶಕುಮಾರ ಗಣೇಶ ದರ್ಬಿ ಆಂಜನೇಯ ರಾಮತ್ನಾಳ ಡಾ. ರಾಮಾಂಜನಿ ದ್ವಾರಕೀಶ್ ಇದ್ದರು.

## ಹತ್ತಿ ಖರೀದಿ ಕೇಂದ್ರಕ್ಕೆ ಶಾಸಕ ಹಂಪಯ್ಯನಾಯಕರಿಂದ ಚಾಲನೆ

ಯುವ ಮಾರ್ಗ ಸುದ್ದಿ



**ಮಾನ್ವಿ,ಅ.27–**ಪಟ್ಟಣದ ಅಟೋನಗರದಲ್ಲಿನ ಶ್ರೀ ಬಸವೇಶ್ವರ ಇಂಡಸ್ಟ್ರೀಸ್ ಆವರಣದಲ್ಲಿ ಭಾರತೀಯ ಹತ್ತಿ ನಿಗಮ ನಿಯಮಿತ ಹುಬ್ಬಳ್ಳಿ ಶಾಖೆ ವತಿಯಿಂದ ಪ್ರಾರಂಭಿಸಲಾದ ಹತ್ತಿ ಖರೀದಿ ಕೇಂದ್ರವನ್ನು ಶಾಸಕ ಹಂಪಯ್ಯನಾಯಕ ರೈತರ ಹತ್ತಿ ತುಂಬಿದ ಟ್ರಾಕ್ಟರ್‌ಗೆ ಪೂಜೆ ಸಲ್ಲಿಸುವ ಮೂಲಕ ಹತ್ತಿ ಖರೀದಿಗೆ ಚಾಲನೆ ನೀಡಿ ಮಾತನಾಡಿ, ಹತ್ತಿಯನ್ನು ಬೆಳೆದ ರೈತರು ಅತಿವೃಷ್ಟಿಯಿಂದಾಗಿ ಹತ್ತಿ ಬೆಳೆಯಿಂದ ತೀವ್ರ ಬೆಳೆ ಹಾನಿಯಾಗಿದ್ದು ಈ ಸಮಯದಲ್ಲಿ ಮಾರುಕಟ್ಟೆಯಲ್ಲಿ ರೈತರ ಹತ್ತಿಗೆ ಉತ್ತಮ ಮಾರುಕಟ್ಟೆ ಬೆಲೆ ದೊರೆಯದೆ ನಷ್ಟ ಅನುಭವಿಸುತ್ತಿರುವುದರಿಂದ ರೈತರ ಅನುಕೂಲಕಾಗಿ ಸಚಿವ ಎನ್.ಎಸ್,ಬೋಸರಾಜು ಜೋತೆಯಲ್ಲಿ ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವ ಮೂಲಕ ಹತ್ತಿ ಖರೀದಿ ಕೇಂದ್ರವನ್ನು ಪ್ರಾರಂಬಿಸಲಾಗಿದೆ.ತಾಲೂಕಿನಲ್ಲಿ 30ಸಾವಿರ ಹೆಕ್ಟರ್ ಪ್ರದೇಶದಲ್ಲಿ ರೈತರು ಹತ್ತಿಯನ್ನು ಬೆಳೆದಿದ್ದು. 3140 ರೈತರು ಇದುವರೆಗೆ ಹತ್ತಿ ಮಾರುವುದಕ್ಕೆ ನೊಂದಣಿ ಮಾಡಿಕೊಂಡಿದ್ದಾರೆ ತಾಲೂಕಿನಲ್ಲಿ ಅಧಿಕಾರಿಗಳು ಹೆಚ್ಚಿನ ಪ್ರಚಾರವನ್ನು ನೀಡುವ ಮೂಲಕ ನಿಗದಿತ ಸಮಯದಲ್ಲಿ ಇನ್ನೂ ಹೆಚ್ಚು ರೈತರು ನೊಂದಣಿ ಮಾಡಿಕೊಳ್ಳುವಂತೆ ಮಾಡಬೇಕು ಹಾಗೂ ರೈತರಿಂದ ಹತ್ತಿ(2ನೇಪುಟಕ್ಕೆ)

## ರಾಯಚೂರು ಜಿಲ್ಲಾದ್ಯಂತ ವಿವಿಧೆಡೆ ವಿಶೇಷ ಮಿಂಚಿನ ಮತದಾರ ನೋಂದಣಿ ಅಭಿಯಾನ

ಯುವ ಮಾರ್ಗ ಸುದ್ದಿ



**ರಾಯಚೂರು,ಅ.27–**ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ– 2026ರ ಮತದಾರರ ವಿಶೇಷ ನೋಂದಣಿ ಅಭಿಯಾನವು ರಾಯಚೂರ ಸೇರಿದಂತೆ ಸಿಂಧನೂರ, ಮಾನವಿ, ಮಸ್ಕಿ, ಲಿಂಗಸೂರ, ದೇವದುರ್ಗ, ಸಿರವಾರ ಸೇರಿದಂತೆ ವಿವಿಧೆಡೆ ಅಕ್ಟೋಬರ 27ರಂದು ಯಶಸ್ವಿಯಾಗಿ ನಡೆಯಿತು.

ಮಾನವಿಯ ಕಾಕತೀಯ ಪ್ರೌಢಶಾಲೆ, ಸಿಂಧನೂರಿನ ಆದರ್ಶ ವಿದ್ಯಾಲಯ, ಲಿಂಗಸುಗೂರು ತಾಲೂಕು ಪಂಚಾಯತ್, ಮಸ್ಕಿ ಕೇಂದ್ರ ಶಾಲೆ, ಸಿರವಾರದ ಶ್ರೀಬಸವ ಪದವಿ ಪೂರ್ವ ಕಾಲೇಜು, ದೇವದುರ್ಗದ ತಹಶೀಲ್ದಾರ್ ಕಾರ್ಯಾಲಯದಲ್ಲಿ ತಾಲೂಕು ಮಟ್ಟದ ಸ್ವೀಪ್ ಸಮಿತಿಯಿಂದ ಮತದಾರರ ವಿಶೇಷ ಮಿಂಚಿನ ನೋಂದಣಿ ಅಭಿಯಾ ನ ನಡೆಯಿತು.

**ಲಿಂಗಸಗೂರು ತಾಲೂಕು:** ಮತದಾರರ ಪಟ್ಟಿ ತಯಾರಿಕೆ ಕುರಿತಂತೆ ಮಿಂಚಿನ ನೋಂದಣಿ ಅಭಿಯಾನ ಅಂಗವಾಗಿ ಲಿಂಗಸುಗೂರು ತಹಶೀಲ್ದಾರ್ ಸತ್ಯಮ್ಮ ಅವರು ತಾಲೂಕಿನ ವಿವಿಧ ಶಾಲೆಗಳಿಗೆ ಭೇಟಿ ನೀಡಿ ನಮೂನೆ–19 ಅರ್ಜಿಗಳನ್ನು ಸ್ವೀಕರಿಸಿದರು.

**ದೇವದುರ್ಗ ತಾಲೂಕು:** ದೇವದುರ್ಗ ತಹಶೀಲ್ದಾರ ಕಾರ್ಯಾಲಯದಲ್ಲಿ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ವಿಶೇಷ ನೋಂದಣಿ ಅಭಿಯಾನ ನಡೆಯಿತು.

**ಮಾನವಿ ತಾಲೂಕು:** ಕಾಕತೀಯ ಪ್ರಾಥಮಿಕ ಮತ್ತು ಪ್ರೌಢಶಾಲೆಯಲ್ಲಿ ತಹಶೀಲ್ದಾರರು ಹಾಗೂ ತಾಪಂ ಕಾರ್ಯ ನಿರ್ವಹಣಾಧಿಕಾರಿಗಳ ನೇತೃತ್ವದಲ್ಲಿ ಮತದಾರ ನೋಂದಣಿ ಕಾರ್ಯಕ್ರಮ ನಡೆಯಿತು. ಮಾನವಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ನೇತೃತ್ವದಲ್ಲಿ ವಿವಿಧ ಸರ್ಕಾರಿ ಪ್ರೌಢಶಾಲೆಗಳ ಶಿಕ್ಷಕರು ನೋಂದಣಿ ಮಾಡಿಸಿದರು.

**ಅರಕೇರಾ ತಾಲೂಕು:** ಅರಕೇರಾ ತಾಲೂಕಿನ ತಹಶೀಲ್ದಾರ ಅಮರೇಶ್ ಬಿರಾದಾರ ಅವರ ನೇತೃತ್ವದಲ್ಲಿ ವಿಶೇಷ ಮಿಂಚಿನ ನೋಂದಣಿ ಅಭಿಯಾನ ಅರಕೇರಾದಲ್ಲಿ ನಡೆಯಿತು. ಬಿಇಓ ಶಿವರಾಜ್ ಪೂಜಾರಿ, ಅಧಿಕಾರಿಗಳಾದ ಬಸವರಾಜ್ ಕಟ್ಟಿಮನಿ, ಸುಂಕದ್, ಶಿವಜಾತಪ್ಪ,(2ನೇಪುಟಕ್ಕೆ)

## ರಸ್ತೆ ಮೇಲೆ ಚರಂಡಿ ನೀರು ಸಾರ್ವಜನಿಕರಿಗೆ ತೊಂದರೆ: ಅಧಿಕಾರಿಗಳ ನಿರ್ಲಕ್ಷ್ಯ..!

ಹನುಮಂತ ಕನ್ನಾಳ



**ಲಿಂಗಸುಗೂರು,ಅ.27–** ಪಟ್ಟಣದ ಕಾರಾಗೃಹ ಹತ್ತಿರ ರಸ್ತೆ ಮೇಲೆ ಚರಂಡಿ ನೀರು ಹರಿದು ಬರುತ್ತಿದ್ದು ಇದರಿಂದ ಪಾದಚಾ ರಿಗಳಿಗೆ ಹಾಗೂ ವಾಹನ ಸವಾಹರಿಗೆ ತುಂಬಾ ತೊಂದರೆ ಯಾಗುತ್ತದೆ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿ ದರು.

ಪಟ್ಟಣ ಅಭಿವೃದ್ಧಿಗಾಗಿ ನಾನಾ ಯೋಜನೆಗಳು ಜನತೆಗೆ ಗಗನ ಕುಸುಮವಾಗಿದೆ. ಅಧಿಕಾರಿಗಳು ಕಾಲಕಾಲಕ್ಕೆ ನಿಯಮಿತವಾಗಿ ಚರಂಡಿಯ ಹೂಳೆತ್ತಿ ಸಾರ್ವಜನಿಕರಿಗೆ ನೈರ್ಮಲ್ಯವನ್ನು ಒದಗಿಸುವಲ್ಲಿ ವಿಫಲವಾಗಿದ್ದಾರೆ. ಕೊಳಕು ತುಂಬಿದ ಚರಂಡಿ ನೀರು ರಸ್ತೆ ಮೇಲೆ ಹರಿಯುತ್ತಿರುವುದು ಪುರಸಭೆ ನಿರ್ಲಕ್ಷ್ಯತನಕ್ಕೆ ಹಿಡಿದ ಕೈಗನ್ನಡಿಯಾಗಿದೆ. ಚರಂಡಿ ಅವ್ಯವಸ್ಥೆಯಿಂದಾಗಿ ಮನೆಯಂಗಳ ಹಾಗೂ ರಸ್ತೆಗಳಲ್ಲಿ ಕೊಳಕು ನೀರು ಸಂಗ್ರಹಗೊಂಡು ನೈರ್ಮಲ್ಯದ ಸಮಸ್ಯೆ ಎದುರಾಗಿದೆ. ಕಲುಷಿತ ವಾತಾವರಣದಿಂದಾಗಿ ಸೊಳ್ಳೆಗಳ ಸಂಖ್ಯೆ ಹೆಚ್ಚಾಗಿದ್ದು ಸಂಜೆಯಾಗುತ್ತಿದ್ದಂತೆ ಮನುಷ್ಯರ ರಕ್ತ ಹೀರಲು ಶುರುಮಾಡುತ್ತವೆ. ಇದರಿಂದಾಗಿ ಮಲೇರಿಯಾ ದಂತಹ ಸಾಂಕ್ರಾಮಿಕ ರೋಗಗಳ ಹರಡುವ ಲಕ್ಷಣಗಳು ಕಾಣಿಸಿಕೊಳ್ಳುವ ಭಯದಲ್ಲಿ ಜನತೆ ಇದ್ದಾರೆ. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಅಭಿವೃದ್ಧಿಗೆ ಕೋಟಿ ಕೋಟಿ ರೂಪಾಯಿ ವೆಚ್ಚ ಮಾಡುತ್ತಿವೆ. ಆದರೆ ಕೆಲಸವೆಲ್ಲವು ಕಡತಗಳಲ್ಲಿ ಆಗುತ್ತಿದೆ. ಪಟ್ಟಣ ಅಭಿವೃದ್ಧಿ ಮಾಡಬೇಕಾದ ಅಧಿಕಾರಿಗಳು ಮಾತ್ರ ಇದಕ್ಕೂ ನಮಗೂ ಸಂಬಂಧವಿಲ್ಲ ಎನ್ನುವಂತೆ ವರ್ತಿಸುತ್ತಿರುವುದು ಅವರ ಬೇಜವಾಬ್ದಾರಿತನಕ್ಕೆ ಸಾಕ್ಷಿಯಾಗಿದೆ ಎಂದು ಸಾರ್ವಜನಿಕರ ಮಾತಾಗಿದೆ. ರಸ್ತೆ ಮೇಲೆ ಹರಿಯುವ ಚರಂಡಿ ನೀರಿನಿಂದ ಸೊಳ್ಳೆಗಳ ಕಾಟ ದಿನದಿಂದ ದಿನಕ್ಕೆ ವಿಪರೀತವಾಗುತ್ತಿದೆ. ಕೊಳಚೆ ನೀರಿನ ಮೇಲೆಯೇ ಮಕ್ಕಳು, ಮಹಿಳೆಯರು, ವಯೋವೃದ್ಧರು ನಿತ್ಯ ಓಡಾಟ ಮಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಇದರಿಂದ ಸಾರ್ವಜನಿಕರಿಗೆ ಸಾಂಕ್ರಾಮಿಕ ರೋಗ ಭೀತಿ ಕಾಡುತ್ತಿದೆ.

ಪಪಂನಿಂದ ಸ್ವಚ್ಛತೆ ಮಾಡುತ್ತಿಲ್ಲ: ತೆರೆದ ಚರಂಡಿಗಳು ದುರ್ವಾಸನೆ ಬೀರುತ್ತಿದ್ದು, ನಿವಾಸಿಗಳು ತೊಂದರೆಪಡುವಂತಾಗಿದೆ. ತಿಂಗಳು ಕಳೆದ ರೂ ಸ್ವಚ್ಛಗೊಳ್ಳದ ಚರಂಡಿಗಳಿಂದ ರೋಗ ಭೀತಿ ಎದುರಾಗಿದೆ. ಇದರಿಂದಾಗಿ ನಿವಾಸಿಗಳು ನಿತ್ಯ ಹಿಡಿಶಾಪ ಹಾಕುತ್ತಿದ್ದಾರೆ.

**ಪಟ್ಟಣಕ್ಕೆ ಸಾಕಷ್ಟು ಅನುದಾನ ಬರುತ್ತಿದ್ದು ಇದು ಸರಿಯಾಗಿ ಸಮರ್ಪಕ ಹಾಗುತ್ತಿಲ್ಲ ಕೂಡಲೇ ಚರಂಡಿ ಸರಿಪಡಿಸಿ ಸರ್ಕಾರದ ಹಣ ಸರಿಯಾಗಿ ಬಳಕೆ ಮಾಡಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ನೋಡಿಕೊ ಳ್ಳಬೇಕು**

**– ಕರವೇ ಅಧ್ಯಕ್ಷ ಆಂಜನೇಯ ಭಂಡಾರಿ**



# ರಾಯಚೂರಿನಲ್ಲಿ ಮತದಾರರ ವಿಶೇಷ ಮಿಂಚಿನ ನೋಂದಣಿ ಅಭಿಯಾನಕ್ಕೆ ಚಾಲನೆ

1ನೇ ನವೆಂಬರ್ 2025ಕ್ಕೆ ಮೊದಲ 6 ವರ್ಷಗಳ ಅವಧಿಯಲ್ಲಿ ಸೆಕೆಂಡರಿ ದರ್ಜೆಯಲ್ಲಿ ಪ್ರೌಢಶಾಲೆಗಿಂತ ಕಡಿಮೆ ಇಲ್ಲದ ನಿರ್ದಿಷ್ಟ ಪಡಿಸಿದಂತಹ ರಾಜ್ಯದೊಳಗಿನ ಯಾವುದೇ, ಸರ್ಕಾರದಿಂದ ಮಾನ್ಯತೆ ಪಡೆದ ಶೈಕ್ಷಣಿಕ ಸಂಸ್ಥೆಗಳಲ್ಲಿ ಒಟ್ಟು ಕನಿಷ್ಠ 3 ವರ್ಷ ಬೋಧನಾ ವೃತ್ತಿಯಲ್ಲಿ ನಿರತವಾಗಿರುವ ಪ್ರತಿಯೊಬ್ಬ ವ್ಯಕ್ತಿಯು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ಸೇರಿಸಲು ಅರ್ಹನಾಗಿರುತ್ತಾನೆ. ಅರ್ಜಿಯೊಂದಿಗೆ ಸಂಸ್ಥೆಯಿಂದ ಅನುಬಂಧ–2ರಲ್ಲಿ ಪಡೆದ ಪ್ರಮಾಣ ಪತ್ರ ಲಗತ್ತಿಸಬೇಕು ಎಂದು ತಿಳಿಸಿದರು.

ಈ ವೇಳೆ ರಾಯಚೂರು ತಹಶಿಲ್ದಾರ್ ಸುರೇಶ್ ವರ್ಮ ಅವರು ಮಾತನಾಡಿ, ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುವಲ್ಲಿ, ಮತದಾನದ ಮೂಲಕ ಅರ್ಹರ ಆಯ್ಕೆಗೆ ಅನುಕೂಲ ಕಲ್ಪಿಸುವ ಚುನಾವಣೆಗಳು ಪ್ರಮುಖ ಪಾತ್ರ ವಹಿಸುತ್ತವೆ. ಇದನ್ನು ಅರಿಯಬೇಕು. ಶಿಕ್ಷಕರ ಕ್ಷೇತ್ರದ ಮತದಾರರಾದಲ್ಲಿ ತಾವು ಮತದಾನಕ್ಕೆ ಅರ್ಹರಾಗಿ, ಸದನದಲ್ಲಿ ಶಿಕ್ಷಕರ ಧ್ವನಿಯಾಗಲು ತಾವು ಇಚ್ಛಿಸುವ ಪ್ರತಿನಿಧಿಯ ಆಯ್ಕೆಗೆ ಮತದಾನಕ್ಕೆ ಅವಕಾಶ ಸಿಗಲಿದೆ ಎಂದು ಸಲಹೆ ಮಾಡಿದರು.

ಇದೇ ಸಂದರ್ಭದಲ್ಲಿ ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ನಿರ್ದೇಶಕರಾದ ಡಾ.ಬಿ.ಹೆಚ್.ರಮೇಶ, ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆಡಳಿತ ಅಧಿಕಾರಿ ಗುರುಸಿದ್ದಯ್ಯ ಸ್ವಾಮಿ ಹಿರೇಮಠ, ರಾಯಚೂರು ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಪವಾರ್, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ.ಬಿ.ಬಡಿಗೇರ, ರಿಮ್ಸ್ ಸಂಸ್ಥೆಯ ಹೆಚ್ಚುವರಿ ಪ್ರಾಂಶುಪಾಲರಾದ ಮಂಜುನಾಥ, ಔಷಧ ವಿಭಾಗದ ಹೆಚ್ಒಡಿ ಡಾ.ಬಸವರಾಜ ಎಮ್.ಪಾಟೀಲ್, ಔಷಧ ವಿಭಾಗದ ಹೆಚ್ಚುವರಿ ಅಧಿಕಾರಿ ಡಾ.ಅರವಿಂದ ಸಂಗಾವಿ, ಶಿಶು ಅಭಿವೃದ್ಧಿ ಅಧಿಕಾರಿ ಮಂಜುನಾಥ, ರಾಯಚೂರು ಕ್ಷೇತ್ರ ಶಿಕ್ಷಣಾಧಿಕಾರಿ ಈರಣ್ಣ ಕೋಸಗಿ, ಮತದಾರ ಸಾಕ್ಷರತಾ ಕ್ಲಬ್ ನ ನೋಡಲ್ ಅಧಿಕಾರಿ ಡಾ.ದಂಡಪ್ಪ ಬಿರಾದಾರ, ಚುನಾವಣಾ ಮಾಸ್ಟರ್ ಟ್ರೈನರ್ ಸದಾಶಿವಪ್ಪ, ಡಾ.ದಂಡಪ್ಪ ಬಿರಾದಾರ್ ಸೇರಿದಂತೆ ಇನ್ನೀತರರು ಇದ್ದರು.

## ರೈತರ ಹಿತ ಕಡೆಗಣಿಸಿ ಬೆಂಗಳೂರಿನಲ್ಲಿ ಟಿಬಿ ಅಣೆಕಟ್ಟು ಸಮಿತಿ ಸಭೆ: ಮಾಜಿ ಶಾಸಕ ರಾಜಾ ವೆಂಕಟಪ್ಪನಾಯಕ ಆಕ್ರೋಶ

ಮೇಲೆ ಕೃಷಿ ಇಲಾಖೆಯವರು ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದೂ ಅವರು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಜೆ.ಡಿ.ಎಸ್. ರಾಜ್ಯ ಯುವ ಘಟಕದ ಉಪಾಧ್ಯಕ್ಷರಾದ ರಾಜಾ ರಾಮಚಂದ್ರನಾಯಕ, ಸಿರವಾರ ತಾ. ಜೆ.ಡಿ.ಎಸ್. ಅಧ್ಯಕ್ಷರಾದ ಮಲ್ಲಿಕಾರ್ಜುನ ಪಾಟೀಲ್ ಬಲ್ಲಟಗಿ, ಜೆ.ಡಿ.ಎಸ್. ಪಕ್ಷದ ವಕ್ತಾರರಾದ ನಾಗರಾಜ ಭೋಗವತಿ, ಹೆಚ್. ಮೌನೇಶಗೌಡ, ಪಿ. ರವಿಕುಮಾರ, ಪುರಸಭೆ ಸದಸ್ಯರಾದ ಭಾಷ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಹತ್ತಿ ಖರೀದಿ ಕೇಂದ್ರಕ್ಕೆ ಶಾಸಕ ಹಂಪಯ್ಯನಾಯಕರಿಂದ ಚಾಲನೆ

ಖರೀದಿ ನಡೆದ ಮೂರು ದಿನಗಳ ಒಳಗಾಗಿ ರೈತರ ಖಾತೆಗೆ ಹಣವನ್ನು ಜಮಾ ಮಾಡುವುದಕ್ಕೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ತಾಲೂಕಿನಲ್ಲಿ ಅತಿವೃಷ್ಟಿಯಿಂದ ಸಂಭವಿಸಿದ ಬೆಳೆಹಾನಿ ಕುರಿತು ಕೃಷಿ ಇಲಾಖೆ ಹಾಗೂ ಕಂದಾಯ ಇಲಾಖೆ ವತಿಯಿಂದ ಬೆಳೆಹಾನಿ ಕುರಿತು ಸರ್ವೇ ಕಾರ್ಯ ನಡೆಯುತ್ತಿದ್ದು. ಕೇಲವು ತಾಂತ್ರಿಕ ಅಡಚಣೆಗಳಿಂದ ರೈತರಿಗೆ ಬೆಳೆಹಾನಿ ಪರಿಹಾರ ಹಾಕುವಲ್ಲಿ ತಡವಾಗುತ್ತ ಇದ್ದು ಆದಷ್ಟು ಬೇಗನೆ ಸರ್ಕಾರದಿಂದ ರೈತರ ಖಾತೆಗೆ ಬೆಳೆಹಾನಿ ಪರಿಹಾರ ಹಾಕುವುದಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ತಹಸೀಲ್ದಾರ್ ಭೀಮರಾಯ ಬಿ. ರಾಮಸಮುದ್ರ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಕಾರ್ಯದರ್ಶಿ ರಂಗನಾಥ್, ಭಾರತೀಯ ಹತ್ತಿ ನಿಗಮ ನಿಯಮಿತ ಹುಬ್ಬಳ್ಳಿ ಶಾಖೆಯ ಸಿಬ್ಬಂದಿಗಳಾದ ಎ.ಕೆ. ಶರ್ಮ ಹಾಗೂ ಅಜಯ್, ಶೈಲಜಾ ಕಾಟನ್ ಇಂಡಸ್ಟ್ರೀಸ್ ಮಾಲಿಕರಾದ ಸಿದ್ದಪ್ಪಗೌಡ ಆಲ್ದಾಳ , ಮುಖಂಡರಾದ ರಜಾಕ್‌ಸಾಬ್, ರಾಜಾಸುಭಾಷ್‌ಚಂದ್ರನಾಯಕ್ ಸೇರಿದಂತೆ ರೈತರು ಸೇರಿದಂತೆ ಇನ್ನಿತರರು ಇದ್ದರು.

## ರಾಯಚೂರು ಜಿಲ್ಲಾದ್ಯಂತ ವಿವಿಧೆಡೆ ವಿಶೇಷ ಮಿಂಚಿನ ಮತದಾರ ನೋಂದಣಿ ಅಭಿಯಾನ

ಅರುಣಕುಮಾರ್ ಹಾಗೂ ಇನ್ನೀತರರು ಇದ್ದರು.

ಉಡಮಗಲ್ ಖಾನಾಪುರ ಪ್ರೌಢಶಾಲೆ: ಮತದಾರರ ವಿಶೇಷ ಮಿಂಚಿನ ನೋಂದಣಿ ಅಭಿಯಾನದಡಿ ರಾಯಚೂರು ತಾಲೂಕಿನ ಉಡಮಗಲ್ ಖಾನಾಪುರದ ಸರ್ಕಾರಿ ಪ್ರೌಢಶಾಲೆಯ ಎಲ್ಲ ಶಿಕ್ಷಕರು ಫಾರ್ಮ್ 19 ಭರ್ತಿ ಮಾಡಿ ಶಾಲೆಯ ಮುಖ್ಯಗುರುಗಳಾದ ವಿರೇಶ್ ಅಂಗಡಿ ಅವರಿಗೆ ನೀಡಿದರು.

# ಸರ್ಕಾರಿ ಹುದ್ದೆ ಭರ್ತಿಯಲ್ಲಿ ಐದು ವರ್ಷ ವಯೋಮಿತಿ ಸಡಿಲಿಸಲು ಮನವಿ



**ಬಳ್ಳಾರಿ, ಅ.27–** ರಾಜ್ಯದಲ್ಲಿ ಖಾಲಿಯಿರುವ ಹುದ್ದೆಗಳ ಭರ್ತಿಗಾಗಿ ಹಾಗೂ ನೇಮಕಾತಿಯಲ್ಲಿ ಕನಿಷ್ಠ ಐದು ವರ್ಷ ವಯೋಮಿತಿ ಸಡಲಿಕೆಗಾಗಿ ಒತ್ತಾಯಿಸಿ ಡಿವೈಎಫ್‌ಐ ಜಿಲ್ಲಾ ಸಮಿತಿಯ ನೇತೃತ್ವದಲ್ಲಿ ಪ್ರತಿಭಟನೆ ಮಾಡಿ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಲಾಯಿತು

ಭಾರತ ಪ್ರಜಾಸತ್ತಾತ್ಮಕ ಯುವಜನ ಫೆಡರೇಷನ್ (ಡಿವೈಎಫ್‌ಐ ಬಳ್ಳಾರಿ ಜಿಲ್ಲಾ ಅಧ್ಯಕ್ಷರು ಯು.ಎರ್ರಿಸ್ವಾಮಿ ಮಾತನಾಡಿ, ,ಈ ಮೊದಲು ರಾಜ್ಯದಲ್ಲಿ ಆಡಳಿತ ನಡೆಸಿದ್ದ ಬಿಜೆಪಿ ಸರಕಾರವು ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡದೇ.

ಉದ್ಯೋಗಾಕಾಂಕ್ಷಿ ಯುವಜನರನ್ನು ವಂಚಿಸಿತ್ತು. ಬಿಜೆಪಿಯ ವೈಫಲ್ಯಗಳನ್ನು ಎತ್ತಿತ್ತೋರಿಸಿದ ತಮ್ಮ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದರೆ ಎಲ್ಲ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಭರವಸೆ ನೀಡಿದ್ದೀರಿ. ಆದರೆ ತಮ್ಮ ನೇತೃತ್ವದ ಕಾಂಗ್ರೆಸ್ ಸರಕಾರ ರಾಜ್ಯದಲ್ಲಿ ಆಡಳಿತ ಚುಕ್ಕಾಣಿ ಹಿಡಿದು ಎರಡೂವರೆ ವರ್ಷವಾಗುತ್ತ ಬಂದರೂ ಖಾಲಿ ಹುದ್ದೆ ಭರ್ತಿಗೊಳಿಸಲು ಅಗತ್ಯ ಕ್ರಮ ಕೈಗೊಳ್ಳದಿರುವುದನ್ನು ಡಿವೈಎಫ್‌ಐ ತೀವ್ರವಾಗಿ ಖಂಡಿಸುತ್ತದೆ.

ರಾಜ್ಯದ ಪ್ರಾಥಮಿಕ ಮತ್ತು ಪ್ರೌಢಶಾಲೆ ಹಾಗೂ ಸಾಕ್ಷರತಾ ಇಲಾಖೆಗಳಲ್ಲಿ 70,727 ಹುದ್ದೆಗಳು, ಉನ್ನತ ಶಿಕ್ಷಣ ಇಲಾಖೆಯಲ್ಲಿ 13,227 ಹುದ್ದೆಗಳು, ಆರೋಗ್ಯ ಇಲಾಖೆಯಲ್ಲಿ 37,069 ಹುದ್ದೆಗಳು, ಒಳಾಡಳಿತದಲ್ಲಿ 26128 ಹಾಗೂ ಪೋಲಿಸ್ ಇಲಾಖೆಯಲ್ಲಿ 8000 ಕ್ಕೂಅಧಿಕ ಹುದ್ದೆಗಳು ಸೇರಿದಂತೆ ರಾಜ್ಯದ 43 ಇಲಾಖೆಗಳಲ್ಲಿ 2,76,386 ಹುದ್ದೆಗಳು ಖಾಲಿಯಿವೆ! ಶಿಕ್ಷಕರು, ಪೋಲಿಸ್ ಹಾಗೂ ಇತರೆ ಹಲವು ಹುದ್ದೆಗಳು ಭರ್ತಿಯಾಗದಿರುವುದರಿಂದ ಉದ್ಯೋಗಾಕಾಂಕ್ಷಿ ಯುವಜನತೆ ಭರವಸೆ ಕಳೆದುಕೊಂಡು ಹತಾಶರಾಗುತ್ತಿದ್ದಾರೆ.

ಆದ್ದರಿಂದ ರಾಜ್ಯ ಸರಕಾರ ಪ್ರಸ್ತುತ ಮೂರು ವರ್ಷದ ವಯೋಮಿತಿ ಸಡಲಿಕೆಯನ್ನು ಮಾಡಿರುವುದು ಹಲವು ಉದ್ಯೋಗಾಕಾಂಕ್ಷಿಗಳಿಗೆ ನೆರವಾಗುವುದಿಲ್ಲ. ಪೊಲೀಸ್ ಕಾನ್ಸೆಬಲ್ ಸೇರಿ ಎಲ್ಲ ನೇಮಕಾತಿಗೆ ಕನಿಷ್ಠ 5 ವರ್ಷ ವಯೋಮಿತಿ ಸಡಿಲಿಕೆ ಮಾಡಬೇಕು. ರಾಜ್ಯದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಕೂಡಲೇ ಭರ್ತಿಗೊಳಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಭಾರತ ಪ್ರಜಾಸತ್ತಾತ್ಮಕ ಯುವಜನ ಫೆಡರೇಷನ್ (ಡಿವೈಎಫ್‌ಐ ) ಬಳ್ಳಾರಿ ಜಿಲ್ಲಾ ಸಮಿತಿಯು ಒತ್ತಾಯಿಸುತ್ತದೆ. ಇಲ್ಲವಾದಲ್ಲಿ ರಾಜ್ಯವ್ಯಾಪಿ ಹೋರಾಟವನ್ನು ತೀವ್ರಗೊಳಿಸಲಾಗುವುದು ಎಂದು ಡಿ.ವೈ.ಎಫ್.ಐ ಜಿಲ್ಲಾ ಅಧ್ಯಕ್ಷರು ಯು.ಎರ್ರಿಸ್ವಾಮಿ ಜಿಲ್ಲಾ ಉಪಾಧ್ಯಕ್ಷರು ಬೈಲಾ ಹನುಮಪ್ಪ ಜಿಲ್ಲಾ ಖಜಾಂಚಿ ಬಿಪಿ ನವೀನ್ ಕ್ರೀಡಾ. ಅಧ್ಯಕ್ಷರು ಜಿ.ಎನ್ ಶ್ರೀನಿವಾಸ್ ಕೆ. ಶಿವಾನಂದ. ರೈಮಾನ್ ಶಿರಾಜ್ ಇತರರು ಸರಕಾರವನ್ನು ಒತ್ತಾಯಿಸಿದ್ದಾರೆ.

# ಮಕ್ಕಳಿಗೆ ತಪ್ಪದೆ ಪೋಲಿಯೋ ಲಸಿಕೆ ಹಾಕಿಸಲು ಸಲಹೆ



ಯುವ ಮಾರ್ಗ ಸುದ್ದಿ

**ರಾಯಚೂರು,ಅ.27–** ಮಕ್ಕಳ ಪಾಲಕರು ಜಾಗೃತರಾಗಿ ತಮ್ಮ ಮಕ್ಕಳಿಗೆ ತಪ್ಪದೇ ಪೋಲಿಯೋ ಲಸಿಕೆ ಹಾಕಿಸಬೇಕು ಎಂದು ಗ್ಯಾರಂಟಿ ಯೋಜನೆಗಳ ತಾಲೂಕುಮಟ್ಟದ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್ ಅವರು ಹೇಳಿದರು.

ನಗರದ ತಾಯ ಮತ್ತು ಮಕ್ಕಳ ಸರ್ಕಾರಿ ಆಸ್ಪತ್ರೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರೋಟರಿ, ಕೃಷ್ಣ–ತುಂಗಾ ರಾಯಚೂರು, ತಾಲೂಕಾ ಆರೋಗ್ಯಾಧಿಕಾರಿಗಳ ಕಾರ್ಯಾ ಲಯ ಇವರ ಸಯುಂಕ್ತಾಶ್ರಯದಲ್ಲಿ ಅಕ್ಟೋಬರ್ 24ರ ಶುಕ್ರವಾರ ನಡೆದ ವಿಶ್ವ ಪೋಲಿಯೋ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸರಕಾರವು ಪೋಲಿಯೋ ನಿರ್ಮೂಲನೆಗೆ ಪಣತೊಟ್ಟ ದಿನದಿಂದಲೇ ಸಮಾಜಮುಖಿ ಸಂಸ್ಥೆ ರೋಟರಿ ಕ್ಲಬ್ ವಿಶ್ವ ಮಟ್ಟದಲ್ಲಿ ವ್ಯಾಪಕ ಪ್ರಚಾರ, ಸ್ವಯಂ ಸೇವಕರ ಸೇವೆ ಒದಗಿಸುವ ನಿರ್ಧಾರದಿಂದ ಪೋಲಿಯೋ ಮುಕ್ತ ಭಾರತದ ಕೊಡುಗೆಯಲ್ಲಿ ರೋಟರಿ ಕ್ಲಬ್ ಪಾತ್ರ ಮಹತ್ವಪೂರ್ಣವಾಗಿದೆ.

ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ ಗುಣಮಟ್ಟದ ಆರೋಗ್ಯ ಸೇವೆ ದೊರೆಯುವಂತೆ ರಾಜ್ಯ ಸರ್ಕಾರವು ಆರೋಗ್ಯ ಕ್ಷೇತ್ರದತ್ತ ಹೆಚ್ಚು ಒತ್ತು ನೀಡಿದೆ. ಯಾವುದೇ ಆಸ್ಪತ್ರೆಗಳಲ್ಲಿ ವೈದ್ಯರ ಮತ್ತು ಸಿಬ್ಬಂದಿಯ ಕೊರತೆಯಾಗದಂತೆ ನೋಡಿಕೊಳ್ಳಲಾಗುತ್ತಿದೆ. ವಿಶೇಷವಾಗಿ ತಾಯಿ ಮಕ್ಕಳ ಆರೋಗ್ಯದತ್ತ ನಾವು ಹೆಚ್ಚಿನ ಗಮನ ಕೊಡಬೇಕಿದೆ ಎಂದು ಅವರು ವೈದ್ಯರಿಗೆ ಸಲಹೆ ಮಾಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ.ಸುರೇಂದ್ರ ಬಾಬು ಅವರು ಮಾತನಾಡಿ, ಪೋಲಿಯೋ ವೈರಸ್ ದೇಹವನ್ನು ಪ್ರವೇಶಿಸಿ ಕೈಕಾಲುಗಳ ಬಲಹೀನತೆಗೆ ಕಾರಣವಾಗುವ ಪೋಲಿಯೋ ರೋಗವನ್ನು ಸಂಪೂರ್ಣವಾಗಿ ತಡೆಯಲು ಮಗುವಿಗೆ 5 ವರ್ಷ ತುಂಬುವುದರೊಳಗೆ 7 ಬಾರಿ ಪೋಲಿಯೋ ಲಸಿಕೆ ತಪ್ಪದೆ ಹಾಕಿಸಬೇಕೆಂದು ಮನವಿ ಮಾಡಿದರು.

1955ರಲ್ಲಿ ವಿಜ್ಞಾನಿ ಡಾ.ಜೋನಾಸ್ ಸಾಲ್ಕ್ ಅವರು ಅಭಿವೃದ್ಧಿ ಪಡಿಸಿದ ಪೋಲಿಯೋ ಲಸಿಕೆಯನ್ನು 1995 ಡಿಸೆಂಬರ್‌ನಲ್ಲಿ ಭಾರತ ಸರಕಾರವು 05 ವರ್ಷದೊಳಗಿನ ಮಕ್ಕಳಿಗೆ ಬಾಯಿ ಮೂಲಕ ಎರಡು ಹನಿ ಪೋಲಿಯೋ ದ್ರಾವಣ ಹಾಕುವ ಪಲ್ಸ್ ಪೋಲಿಯೋ ಅಭಿಯಾನ ಆರಂಭಿಸಿದ ತರುವಾಯ 2011ರ ಜನವರಿಯಲ್ಲಿ ದೇಶದಲ್ಲಿ ಕೊನೆಯ ಪೋಲಿಯೋ ಪ್ರಕರಣದ ನಂತರ ಇಂದು ಕೋಟ್ಯಾಂತರ ಮಕ್ಕಳ ಬದುಕಿನಲ್ಲಿ ಅಂಗವೈಕಲ್ಯತೆಯನ್ನು ದೂರಮಾಡಿದ ಆಶಾಕೀರಣವಾಗಿದೆ. ಈ ದಿಶೆಯಲ್ಲಿ ಜಾಗತಿಕವಾಗಿ ಶೂನ್ಯ ಪೋಲಿಯೋ ಪ್ರಕರಣವಾಗಿಸಲು ಪಾಲಕರು ತಪ್ಪದೆ ಪೋಲಿಯೋ ಲಸಿಕೆ ಹಾಕಿಸಲು ಅವರು ವಿನಂತಿಸಿದರು.

ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ನಂದಿತಾ ಎಮ್. ಎನ್ ಅವರು ಪ್ರಾಸ್ತಾವಿಕ ಮಾತನಾಡಿ, ಪೋಲಿಯೋ ರೋಗವನ್ನು ಪರಿಣಾಮಕಾರಿ ತಡೆಗೆ ಲಸಿಕೆಯನ್ನ ಬಾಯಿ ಮೂಲಕವಲ್ಲದೆ ಚುಚ್ಚುಮದ್ದು ರೂಪದಲ್ಲಿ ಸಹ ನೀಡಲಾಗುತ್ತಿದೆ. ಇದರೊಂದಿಗೆ 12 ಮಾರಕ ರೋಗಗಳು ಬಾರದಂತೆ ನೋಡಿಕೊಳ್ಳಲು ಮಗುವಿಗೆ ಒಂದು ವರ್ಷದೊಳಗೆ ಪೂರ್ಣ ಲಸಿಕೆ ಹಾಗೂ ಎರಡು ವರ್ಷದೊಳಗೆ ಬೂಸ್ಟರ್ ಡೋಸ್ ರೂಪದಲ್ಲಿ ನೀಡುವ ಲಸಿಕೆ ತಪ್ಪದೆ ಹಾಕಲು ಜಿಲ್ಲೆಯಾದ್ಯಂತ ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ನಿರಂತರವಾಗಿ ಲಸಿಕೆ ಹಾಕಲಾಗುತ್ತಿದ್ದು, ಪಾಲಕರು ಈ ಬಗ್ಗೆ ಗಮನ ಹರಿಸಬೇಕು ಎಂದು ಸಲಹೆ ಮಾಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಗಣೇಶ್ ಕೆ, ಆಡಳಿತ ವೈದ್ಯಾಧಿಕಾರಿ ಡಾ.ಪ್ರಜ್ವಲ್ ಕುಮಾರ್, ತಜ್ಞವೈದ್ಯರಾದ ಡಾ.ಅನುಷ್ಕಾ ಅಕುಲಾ, ಡಾ.ಇಮ್ರಾನ್ ಪರ್ವೇಜ್, ರೋಟರಿ ಸಂಸ್ಥೆಯ ಕಾರ್ಯದರ್ಶಿ ಅಂಬ್ರೇಶ್ ರೆಡ್ಡಿ, ಸಂಪತ್‌ಕುಮಾರ್, ಶಿವಕುಮಾರ್, ಮಂಜುನಾಥ್, ಡಿಹೆಚ್‌ಇಓ ಈಶ್ವರ ಹೆಚ್.ದಾಸಪ್ಪನವರ, ಡಿವೈಹೆಚ್‌ಇಓ ಬಸಯ್ಯ, ಹಿರಿಯ ಶುಶ್ರೂಷಣಾಧಿಕಾರಿ ಸೆಲೋಮಿ, ಬಿಹೆಚ್‌ಇಓ ಸರೋಜಾ ಕೆ, ಎಫ್‌ವಿಐ ಕೋಪ್ರೇಶ್ ಸೇರಿದಂತೆ ಇತರರು ಇದ್ದರು.

## ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ದುರಾಡಳಿತ ! ಕಾಟಾಚಾರಕ್ಕಾಗಿ ಹೆಲಿಕಾಪ್ಟರ್‌ನಲ್ಲಿ ಸಮೀಕ್ಷೆ ! ಅತಿವೃಷ್ಟಿ ಪೀಡಿತ ರೈತರಿಗೆ ಪರಿಹಾರದ ವಿಶೇಷ ಪ್ಯಾಕೇಜ್ ಘೋಷಿಸಲಿ: ಎನ್. ರವಿ ಕುಮಾರ

ಯುವ ಮಾರ್ಗ ಸುದ್ದಿ



**ಅರಕೇರಾ,ಅ.27–**ಸಿಎಂ ಸಿದ್ದರಾಮಯ್ಯ ಅವರಿಗೆ ಬುದ್ಧ, ಬಸವ, ಅಂಬೇಡ್ಕರರ ವಿಚಾರ ಧಾರೆಗಳಿದ್ದರೆ, ಅತಿವೃಷ್ಟಿಯಿಂದ ಹಾನಿಗೊಳಗಾದ ರೈತರಿಗೆ ತಕ್ಷಣ ಪರಿಹಾರದ ವಿಶೇಷ ಪ್ಯಾಕೇಜ್ ಘೋಷಿಸಬೇಕು ಎಂದು ವಿಧಾನ ಪರಿಷತ್ ಪ್ರತಿಪಕ್ಷದ ಮುಖ್ಯ ಸಚೇತಕ ಎನ್. ರವಿ ಕುಮಾರ ಆಗ್ರಹಿಸಿದರು.

ಪಟ್ಟಣದ ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ಭಾನುವಾರ ಬಿಜೆಪಿ ವತಿಯಿಂದ ಆಯೋಜಿಸಲಾದ ಮಂಡಲ ಹಾಗೂ ನಗರ ಘಟಕದ ವಿವಿಧ ಮೋರ್ಚಾ ಪದಾಧಿಕಾರಿಗಳ ಪದಗ್ರಹಣ ಮತ್ತು ಪ್ರಧಾನಿ ನರೇಂದ್ರ ಮೋದಿಯವರ ಮನ್ ಕೀ ಬಾತ್ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ದುರಾಡಳಿತ ನಡೆಸುತ್ತಿದೆ. ಕಲ್ಯಾಣ ಕರ್ನಾಟಕ ಪ್ರದೇಶ ನಿರಂತರ ಮಳೆಯಿಂದ ಮಲೆನಾಡಂತಾಗಿದೆ. ಮಳೆಯಿಂದ ಹಾನಿಯಾದ ರೈತರ ಹೊಲಗಳಿಗೆ ಉಸ್ತುವಾರಿ ಮಂತ್ರಿಗಳು ಭೇಟಿ ನೀಡಿಲ್ಲ. ಕಾಟಾಚಾರಕ್ಕಾಗಿ ಹೆಲಿಕಾಪ್ಟರ್‌ನಲ್ಲಿ ಸಮೀಕ್ಷೆ ನಡೆಸುವುದಲ್ಲ, ರೈತರ ಬಳಿಗೆ ತೆರಳಿ ಅವರ ಕಷ್ಟ, ನಷ್ಟಗಳನ್ನು ತಿಳಿಯಬೇಕು ಎಂದು ಅವರು ಹೇಳಿದರು.

ಯಡಿಯೂರಪ್ಪ ಸಿಎಂ ಆಗಿದ್ದಾಗ ಎನ್‌ಡಿಆರ್‌ಎಫ್ ನೀತಿ ಮೀರಿಯೂ ರೈತರಿಗೆ ಪರಿಹಾರ ನೀಡಲಾಗಿತ್ತು. ಆದರೆ ಈಗಿನ ಕಾಂಗ್ರೆಸ್ ಸರ್ಕಾರಕ್ಕೆ ರಸ್ತೆ ಗುಂಡಿಗಳನ್ನು ಮುಚ್ಚಲು ಸಹ ಆಗುತ್ತಿಲ್ಲ. ವಿದೇಶಿ ಹೂಡಿಕೆ, ಉದ್ಯೋಗ ಸೃಷ್ಟಿ, ಜನರ ಬೇಡಿಕೆ ಎಲ್ಲದರ ಮೇಲೂ ನಿರ್ಲಕ್ಷ್ಯ ತೋರಿಸುತ್ತಿದೆ ಎಂದು ಅವರು ಟೀಕಿಸಿದರು.

ಇಡೀ ಪ್ರಪಂಚ ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವವನ್ನು ಮೆಚ್ಚುತ್ತದೆ. ಆದರೆ ಇಲ್ಲಿನ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ ಮತ್ತು ಕಾಂಗ್ರೆಸ್ ನಾಯಕರು ನಿರಂತರ ಟೀಕೆಯಲ್ಲೇ ಮುಳುಗಿದ್ದಾರೆ. ಅಭಿವೃದ್ಧಿಗಿಂತ ಮೊಂಡುತನ ಪ್ರದರ್ಶನ ಮಾಡುತ್ತಿದ್ದಾರೆ ಎಂದು ರವಿ ಕುಮಾರ ವ್ಯಂಗ್ಯವಾಡಿದರು.

ಮಾಜಿ ಸಚಿವ ಕೆ. ಶಿವನಗೌಡ ನಾಯಕ ಮಾತನಾಡಿ, ಕಾರ್ಯಕರ್ತರ ವೈಮನಸ್ಸಿನಿಂದ ಕಳೆದ ವಿಧಾನಸಭಾ ಚುನಾವಣೆಯಲ್ಲಿ ಹಿನ್ನಡೆಯಾಗಿದೆ. ನಾನು ಮಂತ್ರಿ, ಶಾಸಕನಿದ್ದಾಗ ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದೇನೆ. ಈಗ ಆಯ್ಕೆಯಾದ ಪದಾಧಿಕಾರಿಗಳು ಕ್ರಿಯಾಶೀಲರಾಗಿ ಕಾರ್ಯನಿರ್ವಹಿಸಿ ಪಕ್ಷದ ಬಲವರ್ಧನೆಗೆ ಕೈಜೋಡಿಸಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಮುಂಡರಗಿ ಶಿವಣ್ಣ ತಾತ ಸಾನಿಧ್ಯ ವಹಿಸಿದ್ದರು. ಮಾಜಿ ಸಂಸದ ಬಿ.ವಿ. ನಾಯಕ, ಮಾಜಿ ಶಾಸಕ ತಿಪ್ಪುರಾಜ ಹವಲ್ದಾರ, ಬಿಜೆಪಿ ಜಿಲ್ಲಾಧ್ಯಕ್ಷ ವೀರನಗೌಡ ಲೆಕ್ಕಿಹಾಳ, ಮನ್ ಕೀ ಬಾತ್ ಸಂಚಾಲಕ ನಾಗರಾಜ ಬಾಲ್ಕಿ ಸೇರಿದಂತೆ ಶಾಮರಾವ್ ಕುಲಕರ್ಣಿ, ಡಾ. ಎಚ್.ಎ. ನಾಡಗೌಡ, ಜಂಬಣ್ಣ ನೀಲಗಲ್, ಗೋಪಾಲಪ್ಪಗೌಡ ಶರಣಬಸವ ಪಾಟೀಲ್ ಜೋಳದೆಡಗಿ, ಲಕ್ಷ್ಮಣ ರಾಠೋಡ, ಸಂತೋಷ ರಾಜಗುರು, ವಿಜಯರಾಜೇಶ್ವರಿ, ಸೀತಮ್ಮ, ವೀರಭದ್ರಪ್ಪ ಭೋಗಾವತಿ, ನವರತ್ನ ಬಳೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು

# ಜೂಜಾಟ; 6 ಜನರ ಬಂಧನ

**ಕಲಬುರಗಿ,ಅ.27–**ನಗರದ ಈದ್ಗಾ ಮೈದಾನ ಹತ್ತಿರವಿರುವ ಖುಲ್ಲಾ ಜಾಗದಲ್ಲಿ ಜೂಜಾಟವಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಆರ್.ಜಿ.ನಗರ ಪೊಲೀಸ್ ಠಾಣೆ ಪಿಐ ಕುಬೇರ್ ಎಸ್.ರಾಯಮಾನೆ, ಸಿಬ್ಬಂದಿಗಳಾದ ಮಲ್ಲಣ್ಣಗೌಡ, ಉಮೇಶ್, ಶರಣಬಸವ ಅವರು ದಾಳಿ ನಡೆಸಿ 6 ಜನರನ್ನು ಬಂಧಿಸಿದ್ದಾರೆ.

ಪ್ರದೀಪ್ ಜಮಾದಾರ, ಸಂಗಮೇಶ ಗುಳಗಿ, ನಂದಕುಮಾರ ಬಿರಾದಾರ, ರಾಹುಲ್ ಬಿರಾದಾರ, ಅರುಣಕುಮಾರ ಹದನೂರ, ಸಿದ್ಧಾರೂಢ ಬಿರಾದಾರ ಎಂಬುವವರನ್ನು ಬಂಧಿಸಿ 3,360 ರೂ.ನಗದು ಮತ್ತು 52 ಇಸ್ಪೀಟ್ ಎಲೆಗಳನ್ನು ಜಪ್ತಿ ಮಾಡಿದ್ದಾರೆ.ಆರ್.ಜಿ.ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಡಾ.ಖಮರ್ ಉಲ್ ಇಸ್ಲಾಂ ಸ್ಮರಣಾರ್ಥ ಉಚಿತ ಆರೋಗ್ಯ ಶಿಬಿರ



**ಕಲಬುರಗಿ,ಅ.27–**ಮಾಜಿ ಸಚಿವ ಡಾ.ಖಮರ್ ಉಲ್ ಇಸ್ಲಾಂ ಅವರ ಸ್ಮರಣಾರ್ಥವಾಗಿ ಏಷ್ಯನ್ ಆಸ್ಪತ್ರೆಯಿಂದ ಉಚಿತ ಬೃಹತ್ ಆರೋಗ್ಯ ಶಿಬಿರವನ್ನು ಆಯೋಜಿಸಲಾಗಿತ್ತು, ನಗರ ಮತ್ತು ಸುತ್ತಮುತ್ತಲಿನ ಪ್ರದೇಶಗಳಿಂದ ನೂರಾರು ಜನರು ಭಾಗವಹಿಸಿದ್ದರು.

ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಕೆಎಸ್‌ಐಸಿ ಅಧ್ಯಕ್ಷೆ ಮತ್ತು ಕಲಬುರಗಿ ಉತ್ತರ ಶಾಸಕಿ ಕನೀಜ್ ಫಾತಿಮಾ, ಗೌರವ ಅತಿಥಿಗಳಾಗಿ ಕೆಪಿಸಿಸಿ ಸದಸ್ಯ ಫರಾಜ್ ಉಲ್ ಇಸ್ಲಾಂ ಭಾಗವಹಿಸಿದ್ದರು. ಡಾ.ಖಮರ್ ಉಲ್ ಇಸ್ಲಾಂ ಅವರು ಜನರಿಗೆ ನೀಡಿದ ಸೇವೆಯ ಅರ್ಥಪೂರ್ಣ ಮುಂದುವರಿಕೆಯಾಗಿ ಇಬ್ಬರೂ ಗಣ್ಯರು ಈ ಉಪಕ್ರಮವನ್ನು ಶ್ಲಾಘಿಸಿದರು.

ಆರೋಗ್ಯ ಶಿಬಿರವು ಉಚಿತ ವೈದ್ಯಕೀಯ ಸಮಾಲೋಚನೆಗಳು, ಬಹು ವಿಶೇಷತೆಗಳಲ್ಲಿ ಸಾಮಾನ್ಯ ಆರೋಗ್ಯ ತಪಾಸಣೆಗಳು ಮತ್ತು ಸಾಮಾನ್ಯ ಔಷಧವನ್ನು ನೀಡಿತು. ಪ್ರತಿಯೊಬ್ಬ ಸಂದರ್ಶಕರಿಗೂ ಸರಿಯಾದ ಆರೈಕೆ ಮತ್ತು ಮಾರ್ಗದರ್ಶನ ದೊರೆಯುವುದನ್ನು ಖಚಿತಪಡಿಸಿಕೊಳ್ಳಲು ಏಷ್ಯನ್ ಆಸ್ಪತ್ರೆಯ ವೈದ್ಯರು ಮತ್ತು ಅರೆವೈದ್ಯಕೀಯ ಸಿಬ್ಬಂದಿಯ ತಂಡಗಳು ತಮ್ಮ ಸಮಯ ಮತ್ತು ಪರಿಣತಿಯನ್ನು ಮೀಸಲಿಟ್ಟವು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕಿ ಕನೀಜ್ ಫಾತಿಮಾ ಅವರು ಈ ಕಾರ್ಯಕ್ರಮವನ್ನು ಆಯೋಜಿಸಿದ್ದಕ್ಕಾಗಿ ಏಷ್ಯನ್ ಆಸ್ಪತ್ರೆಯನ್ನು ಶ್ಲಾಘಿಸಿದರು ಮತ್ತು ಎಲ್ಲರಿಗೂ ಸುಲಭವಾಗಿ ಸಿಗುವ ಆರೋಗ್ಯ ಸೇವೆಯ ಮಹತ್ವವನ್ನು ಒತ್ತಿ ಹೇಳಿದರು. ದಿವಂಗತ ಡಾ. ಖಮರ್ ಉಲ್ ಇಸ್ಲಾಂ ಅವರು ಯಾವಾಗಲೂ ಸಾರ್ವಜನಿಕ ಕಲ್ಯಾಣ ಮತ್ತು ಸಮುದಾಯದ ಉನ್ನತಿಗಾಗಿ ಶ್ರಮಿಸುತ್ತಿದ್ದರು, ಈ ಉಪಕ್ರಮವು ಅವರ ಸ್ಮರಣಾರ್ಥ ಸೂಕ್ತವಾದ ಗೌರವವಾಗಿದೆ ಎಂದು ಅವರು ಹೇಳಿದರು.

ಕೆಪಿಸಿಸಿ ಸದಸ್ಯ ಜನಾಬ್ ಫರಾಜ್ ಉಲ್ ಇಸ್ಲಾಂ ಅವರು ವೈದ್ಯಕೀಯ ವೃತ್ತಿಪರರು ಮತ್ತು ಸ್ವಯಂಸೇವಕರಿಗೆ ಕೃತಜ್ಞತೆ ಸಲ್ಲಿಸಿದರು, ಅಂತಹ ಪ್ರಯತ್ನಗಳು ಅವರ ದಿವಂಗತ ತಂದೆ ಪ್ರತಿಪಾದಿಸಿದ ಸಹಾನುಭೂತಿ ಮತ್ತು ಸಾಮಾಜಿಕ ಜವಾಬ್ದಾರಿಯ ಮೌಲ್ಯಗಳನ್ನು ಬಲಪಡಿಸುತ್ತವೆ ಎಂದು ಎತ್ತಿ ತೋರಿಸಿದರು.

ಶಿಬಿರವು ನಿವಾಸಿಗಳಿಂದ, ವಿಶೇಷವಾಗಿ ಹಿಂದುಳಿದ ವರ್ಗಗಳಿಂದ ಅಗಾಧ ಪ್ರತಿಕ್ರಿಯೆಯನ್ನು ಕಂಡಿತು, ಅವರು ಉಚಿತವಾಗಿ ಒದಗಿಸಲಾದ ವ್ಯಾಪಕ ಶ್ರೇಣಿಯ ವೈದ್ಯಕೀಯ ಸೇವೆಗಳಿಂದ ಪ್ರಯೋಜನ ಪಡೆದರು.

ಏಷ್ಯನ್ ಆಸ್ಪತ್ರೆಯ ಆಡಳಿತ ಮಂಡಳಿಯು ಭವಿಷ್ಯದಲ್ಲಿ ಇಂತಹ ಆರೋಗ್ಯ ಶಿಬಿರಗಳನ್ನು ನಿಯಮಿತ ವೈಶಿಷ್ಟ್ಯವನ್ನಾಗಿ ಮಾಡಲು ಉದ್ದೇಶಿಸಿದೆ, ಸಮುದಾಯಕ್ಕೆ ನಿರಂತರ ಬೆಂಬಲವನ್ನು ಖಚಿತಪಡಿಸುತ್ತದೆ ಮತ್ತು ದಿವಂಗತ ಡಾ.ಖಮರ್ ಉಲ್ ಇಸ್ಲಾಂ ಅವರ ದೃಷ್ಟಿಕೋನ ಜೀವಂತವಾಗಿರಿಸುತ್ತದೆ ಎಂದು ಆಸ್ಪತ್ರೆಯ ವ್ಯವಸ್ಥಾಪಕರು ತಿಳಿಸಿದರು.

# ಸನ್ಮಾರ್ಗದತ್ತ ನಡೆದಾಗ ಜೀವನದಲ್ಲಿ ನೆಮ್ಮದಿ:ರಾಜಶೇಖರ್ ಶಿವಾಚಾರ್ಯರು ಕರೆ



**ಕಲಬುರಗಿ,ಅ.27–**ಮನುಷ್ಯನ ಜೀವನದಲ್ಲಿ ನಾವೆಲ್ಲರೂ ಒಳ್ಳೆ ರೀತಿಯಿಂದ ನಡೆದಾಗ ಜೀವನದಲ್ಲಿ ಸ್ವಾರ್ಥಕತೆ ಕಾಣಲು ಸಾಧ್ಯವೆಂದು ಚವಪೂರಿ ಹಿರೇಮಠ ಪೂಜ್ಯ ಡಾ.ರಾಜಶೇಖರ ಶಿವಾಚಾರ್ಯರು ತಿಳಿಸಿದರು.

ಅವರು ಕಲಬುರ್ಗಿ ನಗರದ ಗೋಕುಲ್ ನಗರ ಜೆಡಿಎ ಲೇಔಟ್ ಫಿಲ್ಟರ್ ಬೇಡ ರಸ್ತೆಯಲ್ಲಿರುವ ಶ್ರೀ ಶಿವ ಮಂದಿರ ಟ್ರಸ್ಟ್ ಹಾಗೂ ಅಕ್ಕ-ತಂಗಿಯರ ದೇವಾಲಯ ದಲ್ಲಿ ನಿರ್ಮಿಸಿದ ನೂತನ ಶ್ರೀ ಶಿವ ಮಂದಿರ ಧಾರ್ಮಿಕ ಸಾಂಸ್ಕೃತಿಕ ಭವನ ದ ಉದ್ಘಾಟನಾ ಕಾರ್ಯಕ್ರಮದ ಸಮ್ಮುಖ ವಹಿಸಿ ಮಾತನಾಡಿದರು.

ಶ್ರೀಮ.ನಿ ಪ್ರ.ಸ್ವ ಗುರುಪಾದಲಿಂಗ ಮಹಾ ಶಿವಯೋಗಿಗಳು ಮುತ್ಯಾನ ಬಬಲಾದ ಅವರ ಅಮೃತ ಹಸ್ತದಿಂದ ಶಿವ ಮಂದಿರ ಟ್ರಸ್ಟ್ ಹಾಗೂ ಅಕ್ಕತಂಗಿಯರ ದೇವಾಲಯದಲ್ಲಿ ನಿರ್ಮಿಸಿದ ಧಾರ್ಮಿಕ ಸಂಸ್ಕೃತಿಕ ಭವನವನ್ನು ಲೋಕಾರ್ಪಣೆ ಮಾಡಿದರು

ಸಮ್ಮುಖ ವಹಿಸಿ ಮಾತನಾಡಿದ ಪೂಜ್ಯ ಶ್ರೀ ಡಾ" ರೇವಣಸಿದ್ದ ಶಿವಾಚಾರ್ಯರು ಮಾತನಾಡುತ್ತಾ ಇಂದಿನ ದಿನಮಾನಗಳಲ್ಲಿ ತಮ್ಮ ತಮ್ಮ ಮನೆಯಂಗಳದಲ್ಲಿ ಯಾವುದೇ ಕಾರ್ಯಕ್ರಮ ಮಾಡಬೇಕಾದರೆ ಬಹಳ ಕಷ್ಟ ಧಾರ್ಮಿಕ ಹಾಗೂ ಇನ್ನಿತರ ಕಾರ್ಯಕ್ರಮ ಮಾಡಬೇಕಾದರೆ ಇಂತಹ ಸಂಸ್ಕೃತಿಕ ಭವನ ಬಹಳ ಅಗತ್ಯವೆಂದು ಅವರು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶರಣಬಸಪ್ಪ ಪಾಟೀಲ್ ಅಷ್ಟಗಿ ಶ್ರೀ ಶಿವಮಂದಿರ ಟ್ರಸ್ಟ್ ಹಾಗು ಅಕ್ಕತಂಗಿ ದೇವಾಲಯ

ಮುಖ್ಯ ಅತಿಥಿಗಳಾಗಿ ಪ್ರವೀಣ ಪಾಟೀಲ ಹರವಾಳ ಅಧ್ಯಕ್ಷರು ಜೆಸ್ಕಾಂ ಕಲ್ಬುರ್ಗಿ ಜಯಶ್ರೀ ಬಸವರಾಜ ಮತ್ತಿಮೂಡ ಮಾತನಾಡಿದರು

ಮಹಾನಗರ ಪಾಲಿಕೆ ಸದಸ್ಯರ ದಿಗಂಬರ ನಾಡಗೌಡ ಶ್ರೀ ಮಂಜುನಾಥ್ ಹವಾಲ್ದಾರ ಎಇಇ ಲೋಕೋಪಯೋಗಿ ಇಲಾಖೆ ಕಲಬುರ್ಗಿ ರಾಮಚಂದ್ರ ಅವರಳ್ಳಿ ಬಿಜೆಪಿ ಮುಖಂಡರು ಶಿವಾನಂದ ರಾಠೋಡ ಉಪಾಧ್ಯಕ್ಷರು ಶ್ರೀ ಶಿವ ಮಂದಿರ ಹಾಗೂ ಅಕ್ಕತಂಗಿ ಟ್ರಸ್ಟ್ ಕಲ್ಬುರ್ಗಿಸಹದೇವ ಬಿರಾದಾರ ಕಾರ್ಯದರ್ಶಿಗಳು ಶ್ರೀ ಶಿವ ಮಂದಿರ ಹಾಗೂ ಅಕ್ಕ ತಂಗಿ ಟ್ರಸ್ಟ್ ಕಲ್ಬುರ್ಗಿ ರೇವಪ್ಪ ಸೊರಡೆ ಗೋಕುಲ ನಗರ ಗೋಪಾಲ ಪಾಲಾದಿ ಉದ್ಯಮಿದಾರರ ಕಲಬುರ್ಗಿ ಶಿವಾನಂದ ಮಾಳಗಿ ಶರಣು ಆಲಗೂಡಶಿವಶಂಕರ ಬಿರಾದಾರ ಹಾಗೂ ಕಲಾತಂಡದ ವರಿಂದ ಸಂಗೀತ ಕಾರ್ಯಕ್ರಮ ಈ ಕಾರ್ಯಕ್ರಮದ ನಿರೂಪಣೆಯನ್ನು ಪರಮೇಶ್ವರ ಚೀಲಿ ವರನಾಳ ಅವರಿಂದ

ಈ ಪವಿತ್ರ ಕಾರ್ಯಕ್ರಮದಲ್ಲಿ ಬಡಾವಣೆಯ ಸದ್ಭಕ್ತರು ಭಾಗವಹಿಸಿ ಕಾರ್ಯಕ್ರಮದಲ್ಲಿ ಭಾಗವಹಿಸಿದರು ಶಿವ ಮಂದಿರ್ ಅಕ್ಕತಂಗಿ ದೇವಾಲಯ ಟ್ರಸ್ಟ್ ಅಧ್ಯಕ್ಷರು ಉಪಾಧ್ಯಕ್ಷರು ಸರ್ವ ಸದಸ್ಯರು ಬಡಾವಣೆ ಸದ್ಭಕ್ತರು ಭಾಗವಹಿಸಿದ್ದರು

# ಜನ ಸ್ಪಂದನಾ ಸೇವಾ ಟ್ರಸ್ಟ್ ವತಿಯಿಂದ ಕಾಂತಾರ-1 ನಟನಿಗೆ ಸನ್ಮಾನ


**ಯುವ ಮಾರ್ಗ ಸುದ್ದಿ**

**ಮಾನ್ವಿ,ಅ.27–**ಜನ ಸ್ಪಂದನಾ ಸೇವಾ ಟ್ರಸ್ಟ್ ವತಿಯಿಂದ ಕಾಂತಾರ 1 ಚಿತ್ರದಲ್ಲಿ ನಟಿಸಿದ ಹನುಮಂತ ಭಜಂತ್ರಿ ಉದ್ಬಳ್ ಮಾನ್ವಿ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಅಧ್ಯಕ್ಷರಾದ ರಾಮು ದೊಡ್ಡಿ, ಆಂಜನೇಯ ಜಗ್ಲಿ, ಮಹಾಂತೇಶ್ ಶಿಕ್ಷಕರು, ನಾಗರಾಜ್ ಬ್ಯಾಗವಟ್, ಶಿವರಾಜ್, ದೇವರಾಜ್, ಬಸವರಾಜ್, ಹುಲಿಗೇಶ್, ರಾಯಣ್ಣ ಭಾಗವಹಿಸಿದ್ದರು



# ಬೆಂದವರಷ್ಟೇ ಬೇಂದ್ರೆಯಾಗಲು ಸಾಧ್ಯ



**ಕಲಬುರಗಿ,ಅ.27–** ಬೇಂದ್ರೆಯವರು ಜೀವನದಲ್ಲಿ ಅನೇಕ ಕಷ್ಟಗಳನ್ನು ಅನುಭವಿಸಿ, ಅವುಗಳನ್ನು ಸಾಹಿತ್ಯದಲ್ಲಿ ಕೃಷಿ ಮಾಡಿದ್ದರಿಂದ ಅವರ ಸಾಹಿತ್ಯವು ಹೆಚ್ಚು ನೈಜತೆ ಹಾಗೂ ಗಟ್ಟಿತನದಿಂದ ಕೂಡಿದೆ. ಅವರಂತೆ ಸಾಹಿತ್ಯಕವಾಗಿ ಮೇರು ಸಾಧನೆ ಮಾಡಬೇಕಾದರೆ, ಸಾಕಷ್ಟು ಸಮಸ್ಯೆಗಳನ್ನು ಮೆಟ್ಟಿ ನಿಲ್ಲಬೇಕು. 'ಜೀವನದಲ್ಲಿ ಬೆಂದವರು ಮಾತ್ರ ಬೇಂದ್ರೆಯಾಗಲು ಸಾಧ್ಯವಿದೆ' ಎಂದು ಉಪನ್ಯಾಸಕ, ಲೇಖಕ ಎಚ್.ಬಿ.ಪಾಟೀಲ ಮಾರ್ಮಿಕವಾಗಿ ಅಭಿಮತಪಟ್ಟರು.

ತಾಲೂಕಿನ ಫರತಾಬಾದನ ಕರಿಗೋಳೇಶ್ವರ ದೇವಸ್ಥಾನದ ಆವರಣದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಭಾನುವಾರ ಏರ್ಪಡಿಸಿದ್ದ 'ವರಕವಿ ದ.ರಾ.ಬೇಂದ್ರೆಯವರ 44ನೇ ಪುಣ್ಯಸ್ಮರಣೋತ್ಸವ' ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು.

ಸಮ ಸಮಾಜದ ನಿರ್ಮಾಣಕ್ಕೆ ಅನುಭವ, ನೈಜತೆ, ಮೌಲ್ಯಗಳಿಂದ ಕೂಡಿದ ಶ್ರೇಷ್ಠ ಸಾಹಿತ್ಯವನ್ನು ರಚಿಸಿ, ಕನ್ನಡವನ್ನು ಶ್ರೀಮಂತಗೊಳಿಸಿದ ಬೇಂದ್ರೆಯವರ ಸಾಹಿತ್ಯ, ಕೃತಿಗಳು ವಿಮರ್ಶ ಕರು ಹಾಗೂ ಸಹೃದಯರ ವಿಮರ್ಶಗೆ ಇಂದಿಗೂ ಕೂಡಾ ದಕ್ಕದಿರುವದು ಗಮನಿಸಿದರೆ, ಅವರ ಮೇರು ವ್ಯಕ್ತಿತ್ವ ನಮಗೆ ತಿಳಿಯುತ್ತದೆ. ಬೇಂದ್ರೆಯವರು ನವೋದಯ ಕಾಲಘಟ್ಟದಲ್ಲಿನ ಪ್ರಮುಖವಾದ ಸಾಹಿತಿಯಾಗಿದ್ದಾರೆ. ಮಾನವೀಯ ಮೌಲ್ಯ, ನೈಜತೆಗಳಿಂದ ಕೂಡಿದ ಸಾಹಿತ್ಯವನ್ನು ರಚಿಸಿ ಕನ್ನಡಕ್ಕೆ ಅಮೋಘವಾದ ಕೊಡುಗೆಯನ್ನು ನೀಡಿದ್ದಾರೆ ಎಂದರು.

ಕಸಾಪ ಉತ್ತರ ವಲಯದ ಗೌರವ ಅಧ್ಯಕ್ಷ ಶಿವಯೋಗೆಪ್ಪಾ ಎಸ್.ಬಿರಾದಾರ ಮಾತನಾಡಿ, ಬೇಂದ್ರೆಯವರ ಸಾಹಿತ್ಯದಲ್ಲಿ ದೇಶಿ ಸೊಗಡು ಹಾಸು ಹೊಕ್ಕಿದೆ. ಮರಾಠಿ ಮಾತೃಭಾಷೆಯಾದರು ಕೂಡಾ, ಕನ್ನಡದ ಮೇಲಿನ ಅಪಾರವಾದ ಪ್ರೀತಿಯಿಂದ ಕನ್ನಡಕ್ಕೆ ಜ್ಞಾನಪೀಠ ಪ್ರಶಸ್ತಿ ದೊರಕಿಸಿಕೊಟ್ಟಿದ್ದು ಸಾಮಾನ್ಯವಾದ ಸಂಗತಿಯಲ್ಲ ಎಂದು ನುಡಿದರು.

ಕಾರ್ಯಕ್ರಮದಲ್ಲಿ ಸಂಶೋಧಕ-ಸಾಹಿತಿ ಮುಡಬಿ ಗುಂಡೇರಾವ, ಪ್ರಮುಖರಾದ ಶ್ರೀಕಾಂತ ಪಾಟೀಲ್ ತಿಳಗೋಳ್, ಅಸ್ಲಾಂ ಶೇಖ್, ಮಹಾದೇವಪ್ಪ ಎಚ್.ಬಿರಾದಾರ, ಪ್ರಭು ಸಬಶೆಟ್ಟಿ, ಸಿದ್ದಲಿಂಗ ಪೂಜಾರಿ ಸೇರಿದಂತೆ ಇನ್ನಿತರರಿದ್ದರು.

# ದೇಶಕ್ಕೆ ಅಂಬೇಡ್ಕರ್ ಕೊಡುಗೆ ಅನನ್ಯವಾದುದು : ನಾಗಮಾರಪಳ್ಳಿ



**ಔರಾದ,ಅ.27–** ತಾಲೂಕಿನ ಚಿಂತಾಕಿ ಗ್ರಾಮದಲ್ಲಿ ಭಾರತದ ಸಂವಿಧಾನ ಶಿಲ್ಪಿ ಡಾ. ಬಿ.ಆರ್.ಅಂಬೇಡ್ಕರ್ ಅವರ ಪ್ರತಿಮೆಯನ್ನು ನಾರಂಜ ಸಹಕಾರ ಸಕ್ಕರೆ ಕಾರ್ಖಾನೆ ನಿರ್ದೇಶಕರ ಹಾಗೂ ಡಿಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷ ಉಮಾಕಾಂತ ನಾಗಮಾರಪಳ್ಳಿ ಅನಾವರಣಗೊಳಿಸಿದರು.

ಮಾತನಾಡಿದ ಉಮಾಕಾಂತ ನಾಗಮಾರಪಳ್ಳಿ ಅವರು ಸಮಾನತೆಯ ಸಮಾಜವನ್ನು ನಿರ್ಮಿಸುವಲ್ಲಿ ಮತ್ತು ಅಂಚಿನಲ್ಲಿರುವ ಸಮುದಾಯಗಳನ್ನು ಸಬಲೀಕರಣಗೊಳಿಸುವಲ್ಲಿ ಡಾ. ಅಂಬೇಡ್ಕರ್ ಅವರ ಕೊಡುಗೆಗಳನ್ನು ನಾವು ನೆನಪಿಡಬೇಕು, ತಳಮಟ್ಟದಲ್ಲಿ ಪ್ರಜಾಪ್ರಭುತ್ವವನ್ನು ಬಲಪಡಿಸಲು ಅಂಬೇಡ್ಕರ್ ಅವರ ಸಮಾನತೆ, ನ್ಯಾಯ ಮತ್ತು ಭ್ರಾತೃತ್ವದ ಆದರ್ಶಗಳು ವಿಶ್ವಕ್ಕೆ ಮಾದರಿಯಾಗಿದೆ ಎಂದರು. ಡಾ.ಬಿಆರ್ ಅಂಬೇಡ್ಕರ್ ಅವರ ಪ್ರತಿಮೆಯನ್ನು ಸ್ಥಾಪಿಸುವಲ್ಲಿ ಗ್ರಾಮಸ್ಥರ ಪ್ರಯತ್ನವನ್ನು ಹಾಜರಿದ್ದ ಗಣ್ಯರು ಶ್ಲಾಘಿಸಿದರು, ಇದು ಸಾಮಾಜಿಕ ನ್ಯಾಯದ ಸಂಕೇತ ಮತ್ತು ಭವಿಷ್ಯದ ಪೀಳಿಗೆಗೆ ಸ್ಫೂರ್ತಿ ಎಂದು ತಿಳಿಸಿದರು.

ಈ ಸಂಧರ್ಭದಲ್ಲಿ ಪುಣ್ಯ ಧಮ್ಮಾನಂದ ಭಂತಾಜಿ, ಪೂಜ್ಯ ಸಂಗ ರಕ್ಷಿತ್ ಭಂತಾಜಿ, ಸಿದ್ಧರಾಮ ಶರಣರು ಬೆಲ್ದಾಳ, ಡಾ.ಭೀಮಸೇನರಾವ ಸಿಂಧೆ, ಚಿಂತಾಕಿ ಪಿಎ ಚಂದ್ರಶೇಖರ ನಿರ್ಣೆ, ತರುಣ ಸೂರ್ಯಕಾಂತ ನಾಗಮಾರಪಳ್ಳಿ, ಶಾಮಸುಂದರ ಖಾನಾಪುರೆ, ಸೂರ್ಯಕಾಂತ ಸಿಂಗೆ, ನಂದಾದೀಪ ಬೋರಾಳೆ, ಧನರಾಜ ಮುಸ್ತಾಪುರ, ಸುಭಾಷ ಲಾಧಾ, ಗಣಪತಿ ವಾಸುದೇವ ಸೇರಿದಂತೆ ಚಿಂತಾಕಿ ಹಾಗೂ ವಿವಿಧ ಗ್ರಾಮದ ಗ್ರಾಮಸ್ಥರು ಉಪಸ್ಥಿತರಿದ್ದರು

# ಕಂಪ್ಯೂಟರ್ ಶಿಕ್ಷಣ ಹೊಸ ಕ್ರಾಂತಿಗೆ ನಾಂದಿ : ವಿಜಯಲಕ್ಷ್ಮಿ ಗಡ್ಡೆ



**ಬಸವಕಲ್ಯಾಣ,ಅ.27–** ಕಂಪ್ಯೂಟರ್ ಶಿಕ್ಷಣ ಹೊಸ ಕ್ರಾಂತಿಗೆ ನಾಂದಿಯಾಗಿದೆ. ಮಾಹಿತಿ ಮತ್ತು ಪ್ರಸಾರ ಕ್ಷೇತ್ರದಲ್ಲಿ ಗಣನೀಯ ಬದಲಾವಣೆ ತಂದಿದೆ ಎಂದು ಬಿಡಿಪಿಸಿ ನಿರ್ದೇಶಕಿ ಪ್ರೋ. ವಿಜಯಲಕ್ಷ್ಮಿ ಗಡ್ಡೆ ಹೇಳಿದರು.

ನಗರದ ಶ್ರೀ ಬಸವೇಶ್ವರ ಪದವಿ ಕಾಲೇಜಿನಲ್ಲಿ ಬಿಸಿಎ ಮತ್ತು ಬಿಎಸ್ಸಿ ಕಂಪ್ಯೂಟರ್ ವಿಭಾಗದಿಂದ ಐಕ್ಯುಎಸಿ ಸಹಯೋಗದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಆಧುನಿಕ ಸಮಾಜದಲ್ಲಿ ಕಂಪ್ಯೂಟರ್ ಶಿಕ್ಷಣದ ಪಾತ್ರ ಕುರಿತ ಉಪನ್ಯಾಸ ಹಾಗೂ ಗಣಕಯಂತ್ರ ಪ್ರಯೋಗಾಲಯದ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು,ಸಮೂಹ ಮಾಧ್ಯಮ ಬೆಳವಣಿಗೆಯಲ್ಲಿ ಕಂಪ್ಯೂಟರ್ ಮಹತ್ವದ ಪಾತ್ರ ದೊಡ್ಡದು ಎಂದರು.

ವಿಜ್ಞಾನ ಮತ್ತು ತಂತ್ರಜ್ಞಾನದ ದೊಡ್ಡ ಭಾಗವಾದ ಕಂಪ್ಯೂಟರ್ ಶಿಕ್ಷಣ ಹೊಸ ಹೊಸ ತಿಳುವಳಿಕೆ ನೀಡುತ್ತದೆ. ಜಗತ್ತನ್ನು ಸರಳವಾಗಿ ಸಂಪರ್ಕಿಸುವಂತೆ ಮಾಡಿದೆ ಎಂದರು.

ಬಿಡಿಪಿಸಿ ನಿರ್ದೇಶಕ ಮಲ್ಲಯ್ಯ ಹಿರೇಮಠ ಮಾತನಾಡಿ,ಆಧುನಿಕ ಕಾಲದ ಹೊಸ ಜಗತ್ತು ಮಾಹಿತಿ ತಂತ್ರಜ್ಞಾನದಿಂದ ನಿರ್ಮಾಣವಾಗಿದೆ. ಕಂಪ್ಯೂಟರ್ ಶಿಕ್ಷಣ ಈ ಕಾಲಕ್ಕೆ ಅನಿವಾರ್ಯ ಮತ್ತು ಅಗತ್ಯ.ವ್ಯಕ್ತಿ ವ್ಯಕ್ತಿಗಳಲ್ಲಿ ಸಹಜ ಸಂಪರ್ಕಕ್ಕೆ ಕಂಪ್ಯೂಟರ್ ಸೇತುವೆಯಾಗಿದೆ ಎಂದರು.

ಈ ಕಾಲದ ಎಲ್ಲವನ್ನೂ ಮಾಹಿತಿ ತಂತ್ರಜ್ಞಾನದ ಮೇಲೆಯೇ ನಿಂತಿದೆ. ಎಲ್ಲ ಕ್ಷೇತ್ರದಲ್ಲಿ ಕಂಪ್ಯೂಟರ್ ಧನಾತ್ಮಕವಾಗಿ ಬಳಸಲಾಗುತ್ತಿದೆ. ಇಂದಿನ ಸಾಮಾಜಿಕ ಬದಲಾವಣೆಯಲ್ಲಿ ಗಣಕಯಂತ್ರದ ಪಾತ್ರ ಮಹತ್ವದ್ದು ಎಂದು ಹೇಳಿದರು.

ಪ್ರಾಚಾರ್ಯ ಡಾ. ಭೀಮಾಶಂಕರ ಬಿರಾದಾರ ಮಾತನಾಡಿ, ವೈಜ್ಞಾನಿಕ ಸಂಶೋಧನೆಗಳು, ಹೊಸ ಆವಿಷ್ಕಾರಗಳು ಈಗಿರುವ ಲೋಕವನ್ನು ತಂತ್ರಜ್ಞಾನದ ಜಗತ್ತಾಗಿ ರೂಪಿಸುತ್ತಿದೆ. ಶಿಕ್ಷಣ, ವೈದ್ಯಕೀಯ, ಆಡಳಿತ ಸೇರಿ ಮನುಷ್ಯ ಬದುಕಿನ ಬಹು ಭಾಗ ಗಣಕಯಂತ್ರಗಳೆ ಆವರಿಸಿಕೊಂಡಿವೆ. ಅದರ ಬಳಕೆಯ ವಿವೇಕ, ವಿವೇಚನೆಯ ಅರಿವು ಎಲ್ಲಕ್ಕಿಂತ ಮೊದಲು ಇರಬೇಕಾದ ಅಗತ್ಯವಿದೆ ಎಂದರು.

ಬಿಡಿಪಿಸಿ ಅಧ್ಯಕ್ಷ ಬಸವರಾಜ ಕೋರಕೆ ಅಧ್ಯಕ್ಷತೆ ವಹಿಸಿದ್ದರು. ಉಪಾಧ್ಯಕ್ಷ ಮಲ್ಲಿಕಾರ್ಜುನ ಚಿರಡೆ, ಇದ್ದರು.

ಯುವ ಮಾರ್ಗ



# ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಗೆ ಹೆಸರು ನೋಂದಣಿಗೆ ನವೆಂಬರ್ 6 ಕೊನೆಯ ದಿನ

**ರಾಯಚೂರು,ಅ.27**–ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಗೆ ಹೆಸರು ನೋಂದಾಯಿಸಿಕೊಳ್ಳಲು ನವೆಂಬರ್ 6 ಕೊನೆಯ ದಿನಾಂಕ ಆಗಿದ್ದು, ಅರ್ಹ ಶಿಕ್ಷಕರು ಹೆಚ್ಚಿನ ಆಸಕ್ತಿ ವಹಿಸಿ ಈ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೊಂದಾಯಿಸಿಕೊಂಡು, ಸುಭದ್ರ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಸಕ್ರೀಯವಾಗಿ ಪಾಲ್ಗೊಳ್ಳಬೇಕೆಂದು ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಸಹಾಯಕ ಮತದಾರ ನೋಂದಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ರಾಯಚೂರು ಜಿಲ್ಲೆಯ ಎಲ್ಲಾ ಅರ್ಹ ಮತದಾರರಲ್ಲಿ ವಿನಂತಿಸಿದ್ದಾರೆ.

ಅರ್ಹತಾ ದಿನಾಂಕ 01.11.2025ಕ್ಕೆ ಅನ್ವಯಸುವಂತೆ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯು ನೂತನವಾಗಿ ಸಿದ್ಧಪಡಿಸುವ ಕಾರ್ಯವು ಈಗಾಗಲೇ ಪ್ರಾರಂಭವಾಗಿದೆ. ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯು ಹೊಸದಾಗಿ ಸಿದ್ಧಪಡಿಸಲಾಗುತ್ತಿರುವುದರಿಂದ ಈ ಹಿಂದಿನ ಮತದಾರರ ಪಟ್ಟಿಯಲ್ಲಿ ಹೆಸರು ಇರುವ ಮತದಾರರು ಸಹ ನಮೂನೆ 19 ರಲ್ಲಿ ಹೊಸದಾಗಿ ಅರ್ಜಿ ಸಲ್ಲಿಸಬೇಕು ಎಂದು ಭಾರತ ಚುನಾವಣಾ ಆಯೋಗವು ದಿನಾಂಕ 12.09.2025ರ ಪತ್ರದನ್ವಯ ನಿರ್ದೇಶನ ನೀಡಿದೆ. ಆದ್ದರಿಂದ ಅರ್ಜಿ ನಮೂನೆ 19ರಲ್ಲಿ ಅರ್ಜಿಯನ್ನು ಸ್ವೀಕರಿಸುವ ಕೊನೆಯ ದಿನ ನವೆಂಬರ್ 6 ಆಗಿರುತ್ತದೆ. ನವೆಂಬರ್ 25ರಂದು ಕರಡು ಮತದಾರರ ಪಟ್ಟಿಯನ್ನು ಪ್ರಕಟಣೆ ಮಾಡಲಾಗುತ್ತದೆ. ನವೆಂಬರ್ 25 ರಿಂದ ಡಿಸೆಂಬರ್ 10ರವರೆಗೆ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಲಾಗಿದೆ. ಡಿಸೆಂಬರ್ 30ರಂದು ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುತ್ತದೆ.

ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಹೆಸರು ನೊಂದಾಯಿಸಲು ಕೆಲವು ಮಾರ್ಗಸೂಚಿಗಳನ್ನು ನೀಡಲಾಗಿದೆ. ಭಾರತದ ಪ್ರಜೆಯಾಗಿರುವ, ಆಯಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸಾಮಾನ್ಯ ನಿವಾಸಿಯಾಗಿರುವ ಹಾಗೂ 1ನೇ ನವೆಂಬರ್ 2025ಕ್ಕೆ ಮೊದಲ 6 ವರ್ಷಗಳ ಅವಧಿಯಲ್ಲಿ ಸೆಕೆಂಡರಿ ದರ್ಜೆಯಲ್ಲಿ ಪ್ರೌಢಶಾಲೆಗಿಂತ ಕಡಿಮೆ ಇಲ್ಲದ ನಿರ್ಧಿಷ್ಟಪಡಿಸಿದಂತಹ ರಾಜ್ಯದೊಳಗಿನ ಯಾವುದೇ ಸರ್ಕಾರದಿಂದ ಮಾನ್ಯತೆ ಪಡೆದ ಶೈಕ್ಷಣಿಕ ಸಂಸ್ಥೆಗಳಲ್ಲಿ ಒಟ್ಟು ಕನಿಷ್ಠ 3 ವರ್ಷ ಬೋಧನಾ ವೃತ್ತಿಯಲ್ಲಿ ನಿರತವಾಗಿರುವ ಪ್ರತಿಯೊಬ್ಬ ವ್ಯಕ್ತಿಯು ಮತದಾರರ ಪಟ್ಟಿಯಲ್ಲಿ ತನ್ನ ಹೆಸರನ್ನು ಸೇರಿಸಲು ಅರ್ಹನಾಗಿರುತ್ತಾನೆ. ಹಾಗೇ ನಿರ್ಧಿಷ್ಟಪಡಿಸಿದ ಶೈಕ್ಷಣಿಕ ಸಂಸ್ಥೆಗಳ ಪಟ್ಟಿಯು ಮೊದಲನೇ ಅನುಸೂಚಿಯಲ್ಲಿ ತಿಳಿಸಲಾದ ಅಧಿಕಾರಿಗಳ ಬಳಿ ಇರುತ್ತದೆ. ಖುದ್ದಾಗಿ ಅಥವಾ ಅಂಚೆ ಮುಖಾಂತರ ಒಟ್ಟಾರೆಯಾಗಿ ಸಲ್ಲಿಸಿದ ಅರ್ಜಿಗಳನ್ನು ಮತದಾರರ ನೋಂದಣಾಧಿಕಾರಿಯು ಮತದಾರರ ಪಟ್ಟಿಯಲ್ಲಿ ಸೇರ್ಪಡೆಗಾಗಿ ಪರಿಗಣಿಸತಕ್ಕದ್ದಲ್ಲ. ಆದರೆ, ಸಂಸ್ಥೆಯ ಮುಖ್ಯಸ್ಥರು ಅವರ ಸಿಬ್ಬಂದಿಯವರ ಎಲ್ಲಾ ಅರ್ಜಿಗಳನ್ನು ಒಟ್ಟಾಗಿ ಮತದಾರರ ನೋಂದಣಾಧಿಕಾರಿಗಳಿಗೆ ಕಳುಹಿಸಬಹುದು. ಒಂದೇ ಕುಟುಂಬದ ಎಲ್ಲಾ ಸದಸ್ಯರು ನಮೂನೆ 19 ರಲ್ಲಿ ಅರ್ಜಿಗಳನ್ನು ಕುಟುಂಬದ ಯಾವುದಾದರೂ ಸದಸ್ಯರು ಸಲ್ಲಿಸಬಹುದು ಹಾಗೂ ಪ್ರತಿ ಸದಸ್ಯನಿಗೆ ಸಂಬಂಧಿಸದಂತೆ ಮೂಲ ಪ್ರಮಾಣ ಪತ್ರಗಳನ್ನು ಒದಗಿಸಿ, ಪ್ರಮಾಣ ಪತ್ರವನ್ನು ಪರಿಶೀಲಿಸಿಕೊಳ್ಳತಕ್ಕದ್ದು.

ಅರ್ಜಿಯಲ್ಲಿನ ತಪ್ಪು ಅಥವಾ ತಪ್ಪೆಂದು ಅವನು ತಿಳಿದಿರುವ ಅಥವಾ ನಂಬುವಂತಹ ಅಥವಾ ಸತ್ಯವೆಂದು ನಂಬಲಾಗದಿರುವಂತಹ ಹೇಳಿಕೆಗಳನ್ನು ಅಥವಾ ಘೋಷಣೆಗಳನ್ನು ಮಾಡುವ ಯಾವುದೇ ವ್ಯಕ್ತಿಯನ್ನು ಪ್ರಜಾಪ್ರಾತಿನಿಧ್ಯ ಅಧಿನಿಯಮ 1950ರ 31ನೇ ಪ್ರಕರಣದ ಮೇರೆಗೆ ಶಿಕ್ಷೆಗೆ ಗುರಿಪಡಿಸಲಾಗುವುದೆಂಬುದನ್ನು ಗಮನಿಸತಕ್ಕದ್ದು.

ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಬಯಸುವ ಪ್ರತಿಯೊಬ್ಬರು ಅರ್ಜಿ ನಮೂನೆ 19ನ್ನು ಭರ್ತಿಮಾಡಿ ಅದರೊಂದಿಗೆ ಶೈಕ್ಷಣಿಕ ಸಂಸ್ಥೆಗಳಲ್ಲಿ 1ನೇ ನವೆಂಬರ್ 2025ಕ್ಕೆ ಮೊದಲು 6 ವರ್ಷಗಳ ಅವಧಿಯಲ್ಲಿ ಒಟ್ಟು ಕನಿಷ್ಠ 3 ವರ್ಷ ಭೋದನಾ ವೃತಿಯಲ್ಲಿ ನಿರತವಾಗಿರುವ ಬಗ್ಗೆ ಶೈಕ್ಷಣಿಕ ಸಂಸ್ಥೆಗಳಿಂದ ಅನುಬಂಧ–2 ರಲ್ಲಿ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.ಯಾವುದೇ ವ್ಯಕ್ತಿ ಅಂಚೆ ಮೂಲಕ ಮತದಾರರ ನೋಂದಣಾಧಿಕಾರಿಗಳು, ಸಹಾಯಕ ಮತದಾರರ ನೋಂದಣಾಧಿಕಾರಿಗಳು, ಗೊತ್ತುಪಡಿಸಿದ ಅಧಿಕಾರಿಗೆ ಸಲ್ಲಿಸಿದಲ್ಲಿ ಅಂತಹ ಅರ್ಜಿದಾರರಿಗೆ ಗೊತ್ತು ಪಡಿಸಿದ ಅಧಿಕಾರಿಯು ವಿಚಾರಣೆಗೆ ಹಾಜರಾಗಲು ನೋಟಿಸ್ ನೀಡುತ್ತಾರೆ. ವಿಚಾರಣೆಗೆ ಹಾಜರಾಗದೇ ಅಥವಾ ದಾಖಲೆಗಳನ್ನು ಹಾಜರುಪಡಿಸದಿದ್ದಲ್ಲಿ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ. ಬಲ್ಕ (ಗುಚ್ಛಗಳಲ್ಲಿ) ಅರ್ಜಿಗಳನ್ನು ಸ್ವೀಕರಿಸುವುದಿಲ್ಲ. ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತದ ಮತದಾರರ ಪಟ್ಟಿ ಸಿದ್ದಪಡಿಸಿಕೊಳ್ಳುವ ಕುರಿತು ಹಾಗೂ ಚುನಾವಣಾ ಪೂರ್ವ ತಯಾರಿ ಮಾಡಿಕೊಳ್ಳುವಂತೆ ವಿಭಾಗದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಮತ್ತು ಸಂಬಂಧಪಟ್ಟವರಿಗೆ ನಿರ್ದೇಶನ ನೀಡಲಾಗಿದೆ. ಆದ್ದರಿಂದ ಕರ್ನಾಟಕ ಈಶಾನ್ಯ ಶಿಕ್ಷಕರ ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳು ಇದ್ದಲ್ಲಿ ಮತದಾರರ ನೊಂದಣಾಧಿಕಾರಿಗಳು ಹಾಗೂ ಸಹಾಯಕ ಮತದಾರರ ನೊಂದಣಾಧಿಕಾರಿಗಳ ಕಚೇರಿಯಲ್ಲಿ ಮತ್ತು ಸಂಬಂಧಪಟ್ಟ ವಿಧಾನಸಭಾ ಮತಕ್ಷೇತ್ರದ ಸಹಾಯಕ ಮತದಾರರ ನೊಂದಣಾಧಿಕಾರಿಗಳ ಕಾರ್ಯಾಲಯದಲ್ಲಿ (ಮಹಾನಗರ ಪಾಲಿಕೆ ಹಾಗೂ ತಹಸೀಲ ಕಾರ್ಯಾಲಯದಲ್ಲಿ) ನಿಗದಿಪಡಿಸಿದ ಕಾಲಮಿತಿಯೊಳಗೆ ಸಲ್ಲಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾನ್ವಿಯಲ್ಲಿ ಎದ್ದೇಳು ಕನ್ನಡಿಗ ಕೆಆರ್‌ಎಸ್ ಪಕ್ಷ ಸೇರು ಬಾ ಅಭಿಯಾನ ಯಶಸ್ವಿ

**ಯುವ ಮಾರ್ಗ ಸುದ್ದಿ**







**ಮಾನ್ವಿ,ಅ.27**–ಪಟ್ಟಣದಲ್ಲಿ ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ವತಿಯಿಂದ ಹಮ್ಮಿಕೊಂಡಿದ್ದ ಎದ್ದೇಳು ಕನ್ನಡಿಗ ಕೆ ಆರ್ ಎಸ್ ಪಕ್ಷ ಸೇರು ಬಾ ಅಭಿಯಾನ ಯಶಸ್ವಿಯಾಗಿ ನಡೆಯಿತು. ನಗರದಲ್ಲಿರುವ ಅಂಬೇಡ್ಕರ್ ವೃತ್ತದಿಂದ ಅಭಿಯಾನಕ್ಕೆ ಚಾಲನೆ ನೀಡಿ ತಹಸೀಲ್ದಾರ್ ಕಚೇರಿ ವರೆಗೆ ಅಭಿಯಾನ ಮಾಡಿ ಜನ ಜಾಗೃತಿ,ಹಾಗೂ ಪಕ್ಷದ ಸದಸ್ಯತ್ವ ಮಾಡುವ ಮೂಲಕ ದೇಣಿಗೆ ಸಂಗ್ರಹಿಸಲಾಯಿತು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಕೆ ಆರ್‌ಎಸ್ ಪಕ್ಷದ ಜಿಲ್ಲಾಧ್ಯಕ್ಷರಾದ ರಾಘವೇಂದ್ರ ಕಂದೂರು ಅವರು ಇತ್ತೀಚಿನ ದಿನಗಳಲ್ಲಿ ಕನ್ನಡಿಗರು ಅನುಭವಿಸುತ್ತಿರುವ ನೋವುಗಳಿಗೆ ಕಾರ್ಪಣ್ಯಗಳಿಗೆ ನಮ್ಮನ್ನು ಆಳುತ್ತಿರುವ ರಾಜಕೀಯ ಪಕ್ಷಗಳು ನೇರವಾಗಿ ಕಾರಣ ಅವರವರ ಸ್ವಾರ್ಥದ ಮತ್ತು ಕುಟುಂಬದ ರಾಜಕಾರಣದಲ್ಲಿ ತಾಲೂಕಿನ ಜನರನ್ನು ಮೂರ್ಖರನ್ನಾಗಿ ಮಾಡಿ ಜನರನ್ನು ವಂಚಿಸುತ್ತಿದ್ದಾರೆ ಜನಪರವಾದ ಆಡಳಿತ ನಡೆಸಬೇಕಾದ ಪಕ್ಷಗಳು ಜಾತಿ ರಾಜಕಾರಣ ಹಣಬಲದ ರಾಜಕಾರಣದಲ್ಲಿ ತೊಡಗಿಸಿಕೊಂಡಿವೆ ಹಾಗಾಗಿ ಪಕ್ಷವು ಕನ್ನಡ ನಾಡಿನ ನೆಲಜಲಗಡಿ ಭಾಷೆಯ ಉಳಿವಿಗಾಗಿ ಮತ್ತು ಕನ್ನಡಿಗರಿಗೆ ಉದ್ಯೋಗದಲ್ಲಿ ಹೆಚ್ಚಿನ ಆದ್ಯತೆ ನೀಡುವಿಕೆಗಾಗಿ ಒತ್ತಾಯಿಸಿ ಮುಂದಿನ ನವೆಂಬರ್ ತಿಂಗಳಲ್ಲಿ ಒಂದು ದೊಡ್ಡ ಸಮಾವೇಶ ಆಯೋಜಿಸಲಾಗುತ್ತಿದ್ದು ತಾಲೂಕಿನ ಸಮಸ್ತ ಕನ್ನಡಿಗರು ಕಷ್ಟ ಈ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದು ಎಲ್ಲಾ ಮನವಿ ಮಾಡಿದರು.

ಜಿಲ್ಲಾ ಸಂಘಟನಾ ಕಾರ್ಯದರ್ಶಿ ಜೆ ವೆಂಕಟೇಶ್ ಮಾತನಾಡಿ ರೈತರಿಗೆ ಮಹಿಳೆಯರಿಗೆ,ವಿದ್ಯಾರ್ಥಿಗಳಿಗೆ ಕೃಷಿ ಕಾರ್ಮಿಕರಿಗೆ ಉತ್ತಮವಾದ ಜೀವನ ನಿರ್ವಹಣೆಗೆ ಆನಾನುಕೂಲದ ವಾತಾವರಣ ನಿರ್ಮಾಣವಾಗಿದೆ ಎಲ್ಲಾ ಅವ್ಯವಸ್ಥೆಗಳನ್ನು ವಿರೋಧಿಸಿ ಪ್ರತಿಯೊಬ್ಬರು ಉತ್ತಮವಾದ ಜನ ನಮ್ಮ ಜೀವನ ಮಾಡುವಂತೆ ಹಾಗೂ ರಾಜ್ಯ ಮತ್ತು ಕೇಂದ್ರ ಸರ್ಕಾರದ ಹಲವಾರು ಯೋಜನೆಗಳು ಜನರಿಗೆ ತಲುಪಿಸಿ ಕನ್ನಡಿಗರನ್ನು ಜಾಗೃತಿ ಮೂಡಿಸಲು ಈ ಅಭಿಯಾನ ಹಮ್ಮಿಕೊಳ್ಳಲಾಗಿದ್ದು ಇದಕ್ಕೆ ಕನ್ನಡಪರ ರೈತ ಪರ, ಪ್ರಗತಿಪರ ಸಂಘಟನೆಗಳ ಮುಖಂಡರು, ನಾಯಕರು ಬೆಂಬಲಿಸಬೇಕೆಂದು ವಿನಂತಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಯುವಘಟಕ ಅಧ್ಯಕ್ಷರಾದ ರಾಮಸ್ವಾಮಿ ಅರೋಲಿ, ಕಾರ್ಯದರ್ಶಿ ವಿಶ್ವನಾಥ ನಾಯ್ಡು, ಶರಣಪ್ಪ ಹಂಚಿನಾಳ, ಬಸವರಾಜ ಅಮಿನಗಡ, ಪ್ರಧಾನ ಕಾರ್ಯದರ್ಶಿ ಪಂಪಪತಿ ಹಡಪದು, ರಮೇಶ ನಾಯಕ ತಾಲೂಕ ಅಧ್ಯಕ್ಷ, ವೀರೇಶ್ ಕುರ್ಡಿ, ಕಾರ್ಯದರ್ಶಿ ಅಧ್ಯಕ್ಷರು ಬಸವರಾಜ್ ಮಸ್ಕಿ, ಹನುಮಂತ ಮಸ್ಕಿ ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.

# ಪಟ್ಟಣದ ಮಧ್ಯಭಾಗದಲ್ಲಿರುವ ಶ್ರೀನಿಧಿ ಗ್ಯಾಸ್ ಕಂಪನಿ ಸ್ಥಳಾಂತರಿಸಿ: ಸಾರ್ವಜನಿಕರ ಆಗ್ರಹ

**ಯುವ ಮಾರ್ಗ ಸುದ್ದಿ**




**ಮಾನ್ವಿ,ಅ.27**–ಪಟ್ಟಣದ ಹೃದಯ ಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಶ್ರೀನಿಧಿ ಗ್ಯಾಸ್ ಕಂಪನಿಯಿಂದಾಗಿ ಸಾರ್ವಜನಿಕರಿಗೆ ತೀವ್ರ ತೊಂದರೆಯಾಗಿದ್ದು, ಕೂಡಲೇ ಅದನ್ನು ನಗರದ ಹೊರಭಾಗಕ್ಕೆ ಸ್ಥಳಾಂತರಿಸಬೇಕು ಎಂದು ಸ್ಥಳೀಯ ನಾಗರಿಕರು ಮತ್ತು ವಿವಿಧ ಸಂಘಟನೆಗಳು ಒತ್ತಾಯಿಸಿವೆ.

ನಗರದ ಜನನಿಬಿಡ ಪ್ರದೇಶದಲ್ಲಿರುವ ಈ ಗ್ಯಾಸ್ ಕಂಪನಿಯು ಸ್ಫೋಟಕ ಸಾಮಗ್ರಿಗಳ ಸಂಗ್ರಹದ ಸ್ಥಳವಾಗಿರುವುದರಿಂದ ಸಾರ್ವಜನಿಕ ಸುರಕ್ಷತೆಗೆ ದೊಡ್ಡ ಅಪಾಯವನ್ನುಂಟು ಮಾಡಿದೆ ಎಂದು ನಿವಾಸಿಗಳು ಆತಂಕ ವ್ಯಕ್ತಪಡಿಸಿದ್ದಾರೆ.

**ಸುರಕ್ಷತಾ ಕಾಳಜಿ:** ಗ್ಯಾಸ್ ಏಜೆನ್ಸಿಯ ಸುತ್ತಮುತ್ತಲ ಪ್ರದೇಶದಲ್ಲಿ ಪೆಟ್ರೋಲ್ ಬಂಕ್, ಅನೇಕ ಸಾರ್ವಜನಿಕ ಮನೆಗಳು, ಮತ್ತು ಶಾಲೆಗಳು ಕೂಡ ಇವೆ. ಇಂತಹ ಸೂಕ್ಷ್ಮ ಪ್ರದೇಶದಲ್ಲಿ ಗ್ಯಾಸ್ ಸಿಲಿಂಡರ್‌ಗಳ ದಾಸ್ತಾನು ಇರುವುದು ಒಂದು ಅನಾಹುತಕ್ಕೆ ಆಹ್ವಾನ ನೀಡಿದಂತೆ ಎಂದು ಸ್ಥಳೀಯರು ಹೇಳಿದ್ದಾರೆ. ಯಾವುದೇ ಅಗ್ನಿ ದುರಂತ ಅಥವಾ ಅನಿರೀಕ್ಷಿತ ಘಟನೆ ಸಂಭವಿಸಿದರೆ, ಅದು ಸುತ್ತಮುತ್ತಲಿನ ನೂರಾರು ಕುಟುಂಬಗಳು ಮತ್ತು ವಿದ್ಯಾರ್ಥಿಗಳ ಜೀವಕ್ಕೆ ಅಪಾಯ ತರಲಿದೆ ಎಂದು ಸಾರ್ವಜನಿಕರು ಆತಂಕ ವ್ಯಕ್ತಪಡಿಸಿದ್ದಾರೆ.

**ಬೇಡಿಕೆ:**ಈ ಕೂಡಲೇ ಸಂಬಂಧಪಟ್ಟ ಇಲಾಖೆಗಳು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕು. ನಾಗರಿಕರ ಸುರಕ್ಷತೆಯ ಹಿತದೃಷ್ಟಿಯಿಂದ, ಗ್ಯಾಸ್ ಏಜೆನ್ಸಿಯನ್ನು ನಗರದ ಹೊರವಲಯದಲ್ಲಿ ಸೂಕ್ತವಾದ ಮತ್ತು ಸುರಕ್ಷಿತವಾದ ಸ್ಥಳಕ್ಕೆ ಸ್ಥಳಾಂತರಿಸಲು ತುರ್ತು ಕ್ರಮ ಕೈಗೊಳ್ಳಬೇಕು ಎಂದು ನಾಗರಿಕರು ಆಗ್ರಹಿಸಿದ್ದಾರೆ. ತಮ್ಮ ಬೇಡಿಕೆ ಈಡೇರದಿದ್ದಲ್ಲಿ ಉಗ್ರ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

ಈ ಕುರಿತು ಜಿಲ್ಲಾಡಳಿತ ಹಾಗೂ ತೈಲ ಕಂಪನಿಯ ಅಧಿಕಾರಿಗಳು ಶೀಘ್ರವಾಗಿ ಪ್ರತಿಕ್ರಿಯೆ ನೀಡಿ ಸೂಕ್ತ ಕ್ರಮ ಕೈಗೊಳ್ಳುವರೇ ಎಂಬುದನ್ನು ಕಾದು ನೋಡಬೇಕಿದೆ.

**ಶ್ರೀಚಂದ್ರ ಮೌಳೇಶ್ವರ ದೇವಸ್ಥಾನದಲ್ಲಿ ಪ್ರಾಂಗಣ ಕಾಮಗಾರಿ ವೀಕ್ಷಿಸಿದ ಸಚಿವ ಎನ್,ಎಸ್ ಬೋಸರಾಜು**

# ದೇವಸ್ಥಾನದ ಧಾರ್ಮಿಕ ಕಾರ್ಯಗಳಿಗೆ ಅನುಕೂಲವಾಗಲೆಂದು ಪ್ರಾಂಗಣ ನಿರ್ಮಾಣ : ಸಚಿವ ಎನ್.ಎಸ್.ಬೋಸರಾಜು

**ಯುವ ಮಾರ್ಗ ಸುದ್ದಿ**



**ರಾಯಚೂರು,ಅ.27**–ಶ್ರೀಚಂದ್ರ ಮೌಳೇಶ್ವರ ದೇವಸ್ಥಾನದಲ್ಲಿ ಆಯೋಜಿಸುವ ಧಾರ್ಮಿಕ, ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಹಾಗೂ ದೇವಸ್ಥಾನಕ್ಕೆ ಬರುವ ಭಕ್ತರಿಗೆ ಅನುಕೂಲವಾಗಲಿ ಎಂದು ಪ್ರಾಂಗಣ ನಿರ್ಮಾಣ ಮಾಡಲಾಗುತ್ತಿದೆ ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ತಂತ್ರಜ್ಞಾನ ಇಲಾಖೆಯ ಸಚಿವರಾದ ಎನ್,ಎಸ್ ಬೋಸರಾಜು ಅವರು ತಿಳಿಸಿದರು.ರಾಯಚೂರು ನಗರದ ಐತಿಹಾಸಿಕ ಶ್ರೀ ಚಂದ್ರಮೌಳೇಶ್ವರ ದೇವಸ್ಥಾನಕ್ಕೆ ಭೇಟಿ ನೀಡಿ ನಾಡಿನ ಒಳಿತಿಗಾಗಿ ವಿಶೇಷ ಪೂಜೆ ಸಲ್ಲಿಸಿ 2024–25 ನೇ ಸಾಲಿನ ಸ್ಥಳೀಯ ಪ್ರದೇಶ ಅಭಿವೃದ್ಧಿ ಯೋಜನೆ ಅಡಿಯಲ್ಲಿ ನಿರ್ಮಿಸುತ್ತಿರುವ ಪ್ರಾಂಗಣ ಕಾಮಗಾರಿಯನ್ನು ವೀಕ್ಷಿಸಿ ಮಾತನಾಡಿದರು.ಶ್ರೀ ಚಂದ್ರಮೌಳೇಶ್ವದ ದೇವಸ್ಥಾನ ಐತಿಹಾಸಿಕ ದೇವಸ್ಥಾನವಾಗಿದೆ. ನಗರದ ವಿವಿಧ ಭಾಗಗಳಿಂದ ಭಕ್ತರು ಆಗಮಿಸಿ ವಿವಿಧ ಧಾರ್ಮಿಕ ದೈವೀ ಕಾರ್ಯಕ್ರಮಗಳನ್ನು ಮಾಡುತ್ತಾರೆ. ಸದರಿ ದೇವಸ್ಥಾನಕ್ಕೆ ಬರುವ ಭಕ್ತಾದಿಗಳಿಗೆ ಅನುಕೂಲವಾಗಲೆಂದು ಪ್ರಾಂಗಣ ನಿರ್ಮಾಣ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಮಠ– ಮಾನ್ಯಗಳು ಸಮಾಜದಲ್ಲಿ ಶಾಂತಿ ಸೌಹಾರ್ದತೆಯ ಸಂಕೇತವಾಗಿವೆ. ಎಲ್ಲಾ ರೀತಿಯ ಧಾರ್ಮಿಕ, ಸಾಂಸ್ಕೃತಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳಿಗೆ ಮಠ ಮಾನ್ಯಗಳು ಸಹಕಾರಿಯಾಗಿವೆ ಅಂತಹ ದೇವಸ್ಥಾನಗಳ ಅಭಿವೃದ್ಧಿಗಾಗಿ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಪಾರಸಮಾಲ್ ಸುಖಾಣಿ, ಮಾಹಾನಗರ ಪಾಲಿಕೆ ಮಹಾ ಪೌರರಾದ ನರಸಮ್ಮ ನರಸಿಂಹಲು ಮಾಡಗಿರಿ, ವಿರೂಪಾಕ್ಷಪ್ಪ ಕ್ಯಾದಿಗೇರಿ ಶಿವಶಂಕರ್ ಬಾಳೆ, ರುದ್ರಪ್ಪ ಅಂಗಡಿ, ಜಿ ಶಿವಮೂರ್ತಿ, ನರೇಶ್ ಬೆಲ್ಲಂ, ಡಾ ನಾಗರಾಜ ಬಾಲ್ಕಿ, ಹರಿ ಬಾಬು, ಕಾಂಗ್ರೆಸ್ ಯುವ ಮುಖಂಡರಾದ ಅರುಣದೋತರ ಬಂಡಿ, ಪ್ರಶಾಂತ ಇದ್ದರು.

# ಕೊತ್ತದೊಡ್ಡಿ ಗ್ರಾಮದಲ್ಲಿ ನೂತನ ದೇವಸ್ಥಾನದ ಜೀರ್ಣೋದಾರ



**ಯುವ ಮಾರ್ಗ ಸುದ್ದಿ**

**ರಾಯಚೂರು,ಅ.27**– ಮಹರ್ಷಿ ವಾಲ್ಮೀಕಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಶಾಸಕರಾದ ಬಸನಗೌಡ ದದ್ದಲ್ ಅವರು ಅಕ್ಟೋಬರ್ 26ರಂದು ರಾಯಚೂರು ಗ್ರಾಮೀಣ ಕ್ಷೇತ್ರದ ಜಂಬಲದಿನ್ನಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಕೊತ್ತದೊಡ್ಡಿ ಗ್ರಾಮಕ್ಕೆ ತೆರಳಿ ನೂತನ ದೇವಸ್ಥಾನದ ಜೀರ್ಣೋದ್ದಾರ, ಶ್ರೀ ಆಂಜನೆಯ್ಯಸ್ವಾಮಿಯ ಗರುಡ ಸ್ಥಂಭ ಪ್ರತಿಷ್ಠಾಪನೆ, ನೂತನ ಮೂರ್ತಿಗಳ ಪ್ರತಿಷ್ಠಾಪನೆ ಕಾರ್ಯಕ್ರಮದಲ್ಲಿ ಭಾಗಿಯಾದರು.

ಪೂಜ್ಯ ಶ್ರೀ ವೀರತಪಸ್ವಿ ವೀರಭದ್ರ ಶಿವಚಾರ್ಯ ಸ್ವಾಮೀಜಿ ಹಾಗೂ ಪೂಜ್ಯ ಅವಧೂತ ವೈರಾಗ್ಯ ಚಕ್ರವರ್ತಿ ಸದ್ಗುರು ರಾಮರಾವ್ ತಾತನವರು ಸಾನ್ನಿಧ್ಯ ವಹಿಸಿದ್ದರು.

ಈ ಸಂದರ್ಭದಲ್ಲಿ ಊರಿನ ಹಿರಿಯ ಮುಖಂಡರು, ಸುತ್ತಲಿನ ಗ್ರಾಮಗಳ ಮುಖಂಡರು, ಗ್ರಾಮಸ್ಥರು ಉಪಸ್ಥಿತರಿದ್ದರು.

# ಅಕ್ಟೋಬರ್ 29ರಂದು ವಿವಿಧ ಜಯಂತಿಗಳ ಪೂರ್ವಭಾವಿ ಸಭೆ

**ರಾಯಚೂರು,ಅ.27**–ಇಲ್ಲಿನ ಜಿಲ್ಲಾಡಳಿತದ ವತಿಯಿಂದ ಇದೇ ನವಂಬರ್ 8ರಂದು ಕನಕ ಜಯಂತಿ ಹಾಗೂ 11ರಂದು ವೀರವನಿತೆ ಒನಕೆ ಓಬವ್ವ ಜಯಂತಿ ಆಚರಣೆ ಕುರಿತು ಪೂರ್ವಭಾವಿ ಸಭೆಯನ್ನು ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಅಕ್ಟೋಬರ್ 29ರ ಬೆಳಿಗ್ಗೆ 11ಗಂಟೆಗೆ ಹಮ್ಮಿಕೊಳ್ಳಲಾಗಿದ್ದು, ಸಭೆಗೆ ಸಂಬಂಧಿಸಿದ ಅಧಿಕಾರಿಗಳು ಹಾಗೂ ವಿವಿಧ ಸಮಾಜದ ಮುಖಂಡರು ಸಭೆಗೆ ಹಾಜರಾಗಿ ಸಲಹೆ ಸೂಚನೆಗಳನ್ನು ನೀಡಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಜಿಲ್ಲಾಧಿಕಾರಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ಪತ್ರಕರ್ತರ ಸಂಘದ ಜಿಲ್ಲಾ ಉಪಾಧ್ಯಕ್ಷ ಸ್ಥಾನಕ್ಕೆ ಸೂಗೂರೇಶ್ವರ ಎಸ್ ಗುಡಿ ಉಮೇದುವಾರಿಕೆ ಸಲ್ಲಿಕೆ



**ಯುವ ಮಾರ್ಗ ಸುದ್ದಿ**

**ರಾಯಚೂರು,ಅ.27**– ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ 2025–28ರ ಅವಧಿಗೆ ನಡೆಯುವ ಚುನಾವಣೆಗೆ ಜಿಲ್ಲಾ ಉಪಾಧ್ಯಕ್ಷ ಸ್ಥಾನಕ್ಕೆ ಸೂಗೂರೇಶ್ವರ ಎಸ್ ಗುಡಿ ಅರಕೇರಾ ಭಾನುವಾರ ಚುನಾವಣಾಧಿಕಾರಿ ಮಲ್ಲಣ್ಣ ಅವರಿಗೆ ನಾಮಪತ್ರ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಆರ್ ಗುರುನಾಥ ಜಿಲ್ಲಾ ಅಧ್ಯಕ್ಷರು. ಬಸವರಾಜ ನಾಗಡದಿನ್ನಿ.ಬೀಮರಾಯನಾಯಕ ಹದ್ದಿನಾಳ ಸಂಪಾದಕರು ಸಿದ್ದಯ್ಯಸ್ವಾಮಿ.ಮಲ್ಲಿಕಾರ್ಜುನಯ್ಯ. ಶಿವಪ್ಪ ಮಡಿವಾಳ .ಶರಣಬಸವ ಮಾನ್ವಿಅನೇಕರು ವರದಿಗಾರರು ಉಪಸ್ಥಿತರಿದ್ದರು. ಸಹಾಯಕ ಚುನಾವಣಾಧಿಕಾರಿ ಸುರೇಶ ರೆಡ್ಡಿ ಉಪಸ್ಥಿತರಿದ್ದರು.

# ಪಥ ಸಂಚಲನ ನಡೆಸಲು ಅನುಮತಿ ನೀಡಿ: ಜೈ ಭೀಮ ಸೇನೆ ಒತ್ತಾಯ



**ಕಲಬುರಗಿ,ಅ.27**–ಭಾರತದ ಪ್ರಜಾಪ್ರಭುತ್ವದ ಹಿರಿಮೆಯನ್ನು ಜನಜಾಗೃತಗೊಳಿಸಲು ಮತ್ತು ಪ್ರಬುದ್ಧ ಭಾರತದ ಸಂವಿಧಾನದ ಆಶಯಗಳನ್ನು ಸಾಕಾರೊಳಿಸಲು ನ.2 ರಂದು ಜೈಭೀಮ ಸೇನೆ ವತಿಯಿಂದ ಚಿತ್ತಾಪುರದಲ್ಲಿ ಪಥಸಂಚನಲ ನಡೆಸಲು ನಿರ್ಧರಿಸಿದ್ದು, ಇದಕ್ಕೆ ಅನುಮತಿ ನೀಡಬೇಕು, ಸಚಿವ ಪ್ರಿಯಾಂಕ್ ಖರ್ಗೆ ಮತ್ತು ಅವರ ಕುಟುಂಬದವರಿಗೆ ಅವಾಚ್ಯ ಶಬ್ದಗಳಿಂದ ನಿಂದಿಸಿ ಕೊಲೆ ಬೆದರಿಕೆ ಹಾಕಿದವರನ್ನು ಕೂಡಲೇ ಬಂಧಿಸಬೇಕು ಮತ್ತು ಆರ್‌ಎಸ್‌ಎಸ್ ಬ್ಯಾನ್ ಮಾಡಬೇಕು ಎಂದು ಒತ್ತಾಯಿಸಿ ಜೈಭೀಮ ಸೇನೆ ಜಿಲ್ಲಾ ಘಟಕದ ವತಿಯಿಂದ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಇಂದು ಪ್ರತಿಭಟನೆ ನಡೆಸಲಾಯಿತು.ಸೇನೆ ರಾಜ್ಯ ಸಂಚಾಲಕ ಗುಂಡಪ್ಪ ಲಂಡನಕರ್, ಜಿಲ್ಲಾ ಅಧ್ಯಕ್ಷ ರಾಹುಲ್ ಎಸ್.ಉಪಾರೆ, ಸಿದ್ಧಾರ್ಥ ದಿಕಸಂಗಿಕರ್, ಅಮಿತ್‌ಕುಮಾರ ಎಂ.ಮಾಲೆ, ಅರಣಕುಮಾರ ವಿ., ರೇವಣ್ಣ ಬಾವಿಮನಿ, ದತ್ತು ಬಿ. ಬುಕ್ಕನ್, ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H